ಸಂಪುಟ : 10 ಸಂಚಿಕೆ: 235 ಪುಟ : 4+2 ಬೆಲೆ: 3.00 ಗುರುವಾರ ಅಕ್ಟೋಬರ್ 29 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...  VIJAYA SAKSHI KANNADA DAILY  ಕನ್ನಡ ದಿನಪತ್ರಿಕೆ




Volume : 10 Issue : 235 Pages : 4+2 Price : 3.00 Thursday October 30 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ: ನೀರು ಪೂರೈಕೆ ವಿವರ


■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ದಿ. 30-10-2025 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

**ಸ್ಥಳಗಳ ವಿವರ:** ವಾರ್ಡ್ ನಂ. 16 – ಕುಷ್ಠರೋಗ ಕಾಲೋನಿ, ಅಂಬೇಡ್ಕರ್ ನಗರ, ಗುಡದೂರ ಸ್ವಾಮಿಮಠ, ರಹಮತ್ ನಗರ, ಡಿ ಸಿ ಮಿಲ್ ರಸ್ತೆ, ರಾಮಗಿರಿಯವರ ಲೈನ್, ಡೋರಗಲ್ಲಿ 2 ಭಾಗಗಳು. ವಾರ್ಡ್ 3 – ಮಿಶನ ಕಂಪೌಂಡ, ಬಣ್ಣದ ನಗರ, ಕುಂಬಾರ ಓಣಿ, ಅಯಪ್ಪಜ್ಜನ ರಸ್ತೆ, ಮಲ್ಲಿಕಾರ್ಜುನ ರಸ್ತೆ, ರಜಪೂತಗಲ್ಲಿ, ಬಳಗಾನೂರ ರಸ್ತೆ ಎಡಭಾಗ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಹಾರ ಚುನಾವಣೆ ಬಳಿಕ ಕಾಂಗ್ರೆಸ್ ಸರ್ಕಾರ ಪತನ: ಸುರೇಶ್ ಗೌಡ



■ವಿಜಯಸಾಕ್ಷಿ ಸುದ್ದಿ, ತುಮಕೂರು

ಬಿಹಾರ ಚುನಾವಣೆ ಬಳಿಕ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂದು ಬಿಜೆಪಿ ಶಾಸಕ ಸುರೇಶ್ ಗೌಡ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ನವೆಂಬರ್ 14ಕ್ಕೆ ಬಿಹಾರ ಚುನಾವಣೆ ನಡೆಯುತ್ತದೆ. ಫಲಿತಾಂಶ ಬಂದ ನಂತರ ಕಾಂಗ್ರೆಸ್ ಸರ್ಕಾರ ಪತನ ಆಗುತ್ತದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಕಾಲಿಗೆ ಚಕ್ರ ಕಟ್ಟಿಕೊಂಡು ರಾಜ್ಯ ಸುತ್ತಾಡಿ, ಫಂಡಿಂಗ್ ಮಾಡಿ 138 ಸ್ಥಾನಗಳಿಸಿ ಪಕ್ಷ ಅಧಿಕಾರಕ್ಕೆ ತಂದಿದ್ದಾರೆ. ವಾಡಿಕೆಯಂತೆ ಅವರೇ ಸಿಎಂ ಆಗಬೇಕಿತ್ತು ಎಂದು ಡಿಕೆಶಿ ಪರ ಬ್ಯಾಟ್ ಬೀಸಿದರು.

ಡಿಕೆಶಿ ಅವರ ತಾಖತ್‌ನಿಂದ ಫಂಡ್ ಮೊಬಲೈಜ್ ಮಾಡಿರೋದ್ರಿಂದ, ಪರಿಶ್ರಮ ಹಾಕಿರೋದ್ರಿಂದ ಸರ್ಕಾರ ಬಂದಿದೆ. ಆದರೆ ಸಿದ್ದರಾಮಯ್ಯ ಸಿಎಂ ಆದರು. ಸಿದ್ದರಾಮಯ್ಯ ಏನಾದರೂ ಫಂಡಿಂಗ್ ಮಾಡಿದ್ರಾ? ಹಣ ಕೊಟ್ಟವರ್‍ಯಾರು ಡಿಕೆಶಿ ಅಲ್ಲವೇ? ಡಿಕೆ ಶಿವಕುಮಾರ್ ಪರಿಶ್ರಮಕ್ಕೆ ಸಿದ್ದರಾಮಯ್ಯ ಸಿಎಂ ಆಗಿದ್ದಾರೆ. ಈಗಲೂ ಸಿದ್ದರಾಮಯ್ಯ ಡಿಕೆಶಿಯನ್ನು ಸಿಎಂ ಮಾಡಬಾರದು ಎಂದು ತಂತ್ರ ರೂಪಿಸುತಿದ್ದಾರೆ. ಆದರೆ ಡಿಕೆ ಶಿವಕುಮಾರ್ ಮಾತ್ರ ತಾನು ನೂರಕ್ಕೆ ನೂರು ಸಿಎಂ ಆಗುತ್ತೇನೆ ಎಂದು ಆಪ್ತರ ಬಳಿ ಹೇಳಿಕೊಂಡಿದ್ದಾರೆ ಎಂದರು.

ಆಗಾಗ ಕೊಕ್ಕೆ ಹಾಕುವ ಸಿದ್ದರಾಮಯ್ಯ, ಜಿ ಪರಮೇಶ್ವರ್, ಮಹಾದೇವಪ್ಪ, ಸತೀಶ್ ಜಾರಕಿಹೊಳಿ ಮತ್ತು ಎಂ.ಬಿ.ಪಾಟೀಲ್‌ಗೆ ನೀವುಗಳೇ ಸಿಎಂ ಆಗಿ ಎಂದು ಎತ್ತಿ ಕಟ್ಟುತ್ತಿದ್ದಾರೆ. ಸಿದ್ದರಾಮಯ್ಯರ ಎಲ್ಲಾ ಸ್ಟ್ರಾಟಜಿ ಡಿ.ಕೆ.ಶಿವಕುಮಾರ್‌ಗೆ ಗೊತ್ತಾಗಿದೆ. ಇಬ್ಬರು ಮೇಲ್ನೋಟಕ್ಕೆ ಚೆನ್ನಾಗಿದ್ದವರಂತೆ ಕಾಣುತ್ತಾರೆ. ಆದರೆ ಸಿದ್ದರಾಮಯ್ಯ ಡಿಕೆಶಿಯನ್ನು ಗೋಡೆಗೆ ತಳ್ಳಿ ಬಕಾ, ಬಕಾ ಎಂದು ದಿನಕ್ಕೊಬ್ಬರನ್ನು ಬಿಟ್ಟು ಬಾಕ್ಸಿಂಗ್ ಮಾಡುತ್ತಿದ್ದಾರೆ. ಡಿಕೆ ಶಿವಕುಮಾರ್ ಮಾತ್ರ ದೇವರ ಥರ ನಿಂತುಕೊಂಡಿದ್ದಾರೆ. ಏನೇ ಇದ್ದರೂ ನವೆಂಬರ್ 14ರ ಬಳಿಕ ಈ ಸರ್ಕಾರ ಪತನ ಆಗೋದು ಗ್ಯಾರಂಟಿ ಎಂದು ಹೇಳಿಕೆ ಕೊಟ್ಟಿದ್ದಾರೆ.

### ಸಚಿವ ಎಚ್.ಕೆ. ಪಾಟೀಲರಿಂದ ಸಾರ್ವಜನಿಕರ ಅಹವಾಲು ಸ್ವೀಕಾರ । ಸಚಿವರ ಸ್ಪಂದನಾತ್ಮಕ ಆಡಳಿತಕ್ಕೆ ನಾಗರಿಕರ

# ಜನರ ಅಹವಾಲಿಗೆ ಸಚಿವರ ಸ್ಪಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಮಂಗಳವಾರ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಂದ ಸಾರ್ವಜನಿಕ ಅಹವಾಲು ಸ್ವೀಕಾರ ಕಾರ್ಯಕ್ರಮ ಜರುಗಿತು.

ಸಚಿವರಾದ ಎಚ್.ಕೆ. ಪಾಟೀಲರಿಗೆ ಸಾರ್ವಜನಿಕರು ತಮ್ಮ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಅಹವಾಲು ನೀಡಿದರು. ಅಲ್ಲದೇ ಸಾರ್ವಜನಿಕ ಸಮಸ್ಯೆಗಳ ಕುರಿತು ಹಲವರು ಸಚಿವರ ಗಮನಕ್ಕೆ ತಂದರು.

ಶಾಂತ ಚಿತ್ತದಿಂದಲೇ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದ ಸಚಿವರು, ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ಕೂಡಲೇ ಸಮಸ್ಯೆ ಪರಿಹಾರಕ್ಕಾಗಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.



ದೇವಸ್ಥಾನದ ಗೋಪುರ ನಿರ್ಮಾಣಕ್ಕೆ ಅನುದಾನ, ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಮನವಿ ಸೇರಿದಂತೆ ಸಾರ್ವಜನಿಕರಿಂದ ಸಾಮೂಹಿಕ ಹಾಗೂ ವಯಕ್ತಿಕ ಅಹವಾಲುಗಳನ್ನು ಸ್ವೀಕರಿಸಿ, ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ತಕ್ಷಣ ಪರಿಹಾರ ಮಾಡುವಂತೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಸೂಚಿಸಿದರು.

ಸಾರ್ವಜನಿಕರು ಅನಾರೋಗ್ಯದ ಕಾರಣ ಶಸ್ತ್ರಚಿಕಿತ್ಸೆಗೆ ಸಹಾಯ ಕೋರಿ ತಮ್ಮ ಅಹವಾಲು ತೋಡಿ-ಕೊಂಡರು. ಇದಕ್ಕೆ ಸ್ಪಂದಿಸಿದ ಸಚಿವರಾದ ಎಚ್.ಕೆ. ಪಾಟೀಲರು ಪರಿಹಾರ ನೀಡುವ ಕುರಿತು ಭರವಸೆ ನೀಡಿದರು.

> ಸಚಿವ ಎಚ್.ಕೆ. ಪಾಟೀಲ ಅವರ ಶಾಂತ, ಸಹಾನುಭೂತಿಪೂರ್ಣ ನಡವಳಿಕೆ ಜನರಲ್ಲಿ ಹೆಮ್ಮೆ ಮೂಡಿಸಿ, ಜನನಾಯಕ ಪಾಟೀಲರ ಸ್ಪಂದನಾತ್ಮಕ ಆಡಳಿತಕ್ಕೆ ನಾಗರಿಕರು ಮೆಚ್ಚುಗೆ ವ್ಯಕ್ತಪಡಿಸಿದರು. ಸಚಿವರ ಈ ನೇರ ಸಂವಾದಾತ್ಮಕ ಶೈಲಿ ಸಾರ್ವಜನಿಕರಲ್ಲಿ ಸಂತೋಷ ಉಂಟುಮಾಡಿ, 'ಜನರ ಅಹವಾಲು ಕೇಳುವ ಜನನಾಯಕನಾದ ಎಚ್.ಕೆ. ಪಾಟೀಲರು ನಿಜವಾದ ಸೇವಾ ಮನೋಭಾವ ಇರುವ ವ್ಯಕ್ತಿ' ಎಂಬ ಪ್ರಶಂಸೆ ಎಲ್ಲೆಡೆಯಿಂದ ಕೇಳಿಬಂದಿತು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಕೃಷ್ಣಾ ಪರಾಪುರ, ಶಕುಂತಲಾ ಅಕ್ಕಿ, ಎಸ್.ಎನ್. ಬಳ್ಳಾರಿ, ದುರಗಪ್ಪ ವಿಭೂತಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಎಸಿ ಗಂಗಪ್ಪ ಎಂ, ಅಧಿಕಾರಿಗಳಾದ ಡಾ. ಎಸ್.ಎಸ್. ನೀಲಗುಂದ, ಬಸನಗೌಡ ಕೊಟೂರ, ರಾಜಾರಾಂ ಪವಾರ, ರುದ್ರಣ್ಣಗೌಡ ಜಿ.ಜೆ, ಪದ್ಮಾವತಿ ಜಿ, ರಫೀಕಾ ಹಳ್ಳೂರ, ತಾರಾಮಣಿ ಆರ್, ಶ್ರೀನಿವಾಸ ಮೂರ್ತಿ ಕುಲಕರ್ಣಿ, ಡಾ. ಹುಲಗಣ್ಣವರ, ಬಸವರಾಜ ಬಳ್ಳಾರಿ, ಶರಣು ದೊಡ್ಡೂರ, ಎಂ.ಎಂ. ತುಂಬರಮಟ್ಟಿ, ಮಹಾಂತೇಶ ಕೆ, ರಮೇಶ್, ಅಮೀತ ಬಿದರಿ, ವಸಂತ ಮಡ್ಲೂರ, ಮಲ್ಲಯ್ಯ ಕೆ, ಶಿವಕುಮಾರ ಕುರಿ, ಆರ್. ಎಸ್. ಬುರಡಿ, ಡಾ. ಬಸವರಾಜ ಬೊಮ್ಮನಹಳ್ಳಿ, ಶ್ರೀಧರ ಚಿನಗುಡಿ, ಶಿದ್ದಲಿಂಗ ಮಸಾನಾಯಕ, ಸೇರಿದಂತೆ ಇತರರು ಇದ್ದರು.

### ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಮಲ್ಲಯ್ಯ ಕೊರವನವರ ಮನವಿ

# ನರೇಗಾ ಇ- ಕೆವೈಸಿ ಅಭಿಯಾನದಲ್ಲಿ ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನೋಂದಾಯಿತ ಕುಟುಂಬಗಳ ಜಾಬ್ ಕಾರ್ಡ್‌ಗಳನ್ನು ಇ-ಕೆವೈಸಿ ಮೂಲಕ ಇಂಧೀಕರಿಸಲಾಗುತ್ತಿದ್ದು, ಎಲ್ಲ ನರೇಗಾ ಕೂಲಿ ಕಾರ್ಮಿಕರು ಈ ಅಭಿಯಾನದಲ್ಲಿ ಭಾಗವಹಿಸಿ ಕಡ್ಡಾಯವಾಗಿ ತಮ್ಮ ಜಾಬ್ ಕಾರ್ಡ್‌ಗಳ ಇ-ಕೆವೈಸಿ ಮಾಡಿಕೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಮಲ್ಲಯ್ಯ ಕೊರವನವರ ಮನವಿ ಮಾಡಿದರು.

ಬಧುವಾರ ತಾಲೂಕಿನ ಬಿಂಕದಕಟ್ಟಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಇ-ಕೆವೈಸಿ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.



ತರಬೇತಿ ಪಡೆದ ಎಲ್ಲಾ ಸಿಬ್ಬಂದಿಗಳು ಜಾಬ್ ಕಾರ್ಡ್‌ಗಳಿಗೆ ಇ-ಕೆವೈಸಿ ಮಾಡುವ ಪ್ರಕ್ರಿಯೆಯಲ್ಲಿ ತೊಡಗಿದ್ದು, ಇ-ಕೆವೈಸಿ ಪ್ರಕ್ರಿಯೆಯಲ್ಲಿ ಕೂಲಿ ಕಾರ್ಮಿಕರು ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಮುಂದಿನ ದಿನಗಳಲ್ಲಿ ಇ-ಕೆವೈಸಿ ಮಾಡಿಕೊಳ್ಳದ ಜಾಬ್ ಕಾರ್ಡ್‌ಗಳು ನಿಷ್ಕ್ರಿಯವಾಗುತ್ತವೆ. ಮಹಾತ್ಮ ಗಾಂಧಿ ನರೇಗಾ ಯೋಜನೆಯ ಹೆಚ್ಚು ಪಾರದರ್ಶಕ ಅನುಷ್ಠಾನಕ್ಕೆ ಮತ್ತೊಂದು ಹೆಜ್ಜೆ ಇ-ಕೆವೈಸಿ ಆಗಿದ್ದು, ನರೇಗಾ ಕೂಲಿಕಾರರು, ಕಾಯಕ ಬಂಧುಗಳು ತಮ್ಮ ಜಾಬ್ ಕಾರ್ಡ್‌ಗಳಿಗೆ ಇ-ಕೆವೈಸಿ ಅಪ್ಡೇಟ್ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಎಲ್ಲರೂ ಸಹ ತಪ್ಪದೇ ತಮ್ಮ ಜಾಬ್ ಕಾರ್ಡ್‌ಗಳ ಇ-ಕೆವೈಸಿ ಅಪ್ಡೇಟ್ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ಗ್ರಾಮ ಪಂಚಾಯಿತಿ ಪಿಡಿಓ, ಕಾರ್ಯದರ್ಶಿ, ಡಿಇಓ, ಬಿಎಫ್, ಜಿಕೆಎಂ ಸೇರಿದಂತೆ ನರೇಗಾ ಸಿಬ್ಬಂದಿಯನ್ನು ಸಂಪರ್ಕಿಸಬಹುದು ಎಂದು ಅವರು ತಿಳಿಸಿದರು.

> ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಆದೇಶ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ಸೂಚನೆಯಂತೆ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನೋಂದಾಯಿತ ಸಕ್ರಿಯ ಕೂಲಿಕಾರರ ಜಾಬ್ ಕಾರ್ಡ್‌ನ್ನು ಇ-ಕೆವೈಸಿ ಮೂಲಕ ಮೌಲ್ಯೀಕರಿಸುತ್ತಿದ್ದು, ನರೇಗಾ ಯೋಜನೆಯಡಿ ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳ ಸಕ್ರಿಯ ಕುಟುಂಬಗಳ ಜಾಬ್ ಕಾರ್ಡ್ ಅಭಿಯಾನದ ಮಾದರಿಯಲ್ಲಿ ಅತೀ ತುರ್ತಾಗಿ ಇ-ಕೆವೈಸಿ ಮೂಲಕ ಪೂರ್ಣಗೊಳಿಸಲು ಸಿಬ್ಬಂದಿಗಳಿಗೆ ಅಗತ್ಯ ತರಬೇತಿಯನ್ನು ನೀಡಲಾಗಿದೆ ಎಂದು ಮಲ್ಲಯ್ಯ ಕೊರವನವರ ತಿಳಿಸಿದರು.

ಗ್ರಾಮ ಪಂಚಾಯಿತಿ ಕಾರ್ಯದರ್ಶಿ ರಾಘವೇಂದ್ರ ಹುಲ್ಲೋಜಿ, ವಾಟರ್‌ಮನ್ ಕಾಶೀಂ ದುಂದೂರ, ಬಿಎಫ್‌ಟಿ ದಾವಲಸಾಬ್ ಚಲ್ಲಮರದ, ಭೀಮಶಿ ಆರಟ್ಟಿ ಸೇರಿದಂಯೆ ಸಿಬ್ಬಂದಿಗಳು ಇದ್ದರು.

### ಮುಖ್ಯ ರಸ್ತೆಯ ಪಕ್ಕದಲ್ಲಿರುವ ಅಂಗಡಿಗಳಲ್ಲಿ ಸರಣಿ ಕಳ್ಳತನ

## ಬೇಕರಿಯ ಸಿಹಿ ತಿಂಡಿಗಳನ್ನೂ ಬಿಡದ ಕಳ್ಳರು!




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಂಗಳವಾರ ರಾತ್ರಿ ಪಟ್ಟಣದ ಶಿಗ್ಲಿ ನಾಕಾ ಹತ್ತಿರ 3 ಅಂಗಡಿಗಳು ಹಾಗೂ ಲಕ್ಷ್ಮೀ ನಗರದ ಒಂದು ಮನೆಯ ಕೀಲಿ ಮುರಿದು ಕಳ್ಳತನ ಮಾಡಿರುವ ಘಟನೆಯಿಂದ ಜನತೆ ಬೆಚ್ಚಿ ಬಿದ್ದಿದ್ದಾರೆ.

ಶಿಗ್ಲಿ ನಾಕಾ ಬಳಿ ಇರುವ ಝುರಾಕ್ಸ್ ಅಂಗಡಿ, ಅದರ ಪಕ್ಕದಲ್ಲಿ ಮಿಶ್ರಾ ಪೇಡಾ ಅಂಗಡಿ ಹಾಗೂ ಅದೇ ಸಾಲಿನಲ್ಲಿರುವ ಸ್ಟೇಷನರಿ ಅಂಗಡಿ ಇವುಗಳ ಮೇಲಿನ ತಗಡಿನ ಶೀಟ್‌ಗಳನ್ನು ಕತ್ತರಿಸಿ ಒಳಗಡೆ ಇಳಿದು ಈ ಕೃತ್ಯ ನಡೆಸಿದ್ದು, ಅಂಗಡಿಯಲ್ಲಿದ್ದ ಗಲ್ಲಾಪೆಟ್ಟಿಗೆಯಲ್ಲಿನ ಹಣ ಮತ್ತು ಇನ್ನಿತರ ಕೆಲವು ವಸ್ತುಗಳನ್ನು ಎತ್ತಿಕೊಂಡು ಹೋಗಿದ್ದಾರೆ. ಬೇಕರಿ ಅಂಗಡಿಗೂ ತಗಡಿನ ಶೀಟ್ ಕತ್ತರಿಸುವ ಪ್ರಯತ್ನ ಮಾಡಿದ್ದು, ಯಾವುದೋ ಕಾರಣಕ್ಕೆ ಬಿಟ್ಟು ಹೋಗಿದ್ದಾರೆ. ಅದೇ ವೇಳೆ ಲಕ್ಷ್ಮೀನಗರದಲ್ಲಿಯೂ ಒಂದು ಮನೆಯ ಬಾಗಿಲು ಮುರಿದು ಮನೆಯಲ್ಲಿನ ಬಂಗಾರದ ಒಡವೆಗಳನ್ನು ಕಳ್ಳತನ ಮಾಡಿದ್ದಾರೆಂದು ತಿಳಿದು ಬಂದಿದೆ.

ಈ ಕುರಿತಂತೆ ಪಟ್ಟಣದ ಪೊಲೀಸ್ ಠಾಣೆಯ ಪಿಎಸ್‌ಐ ನಾಗರಾಜ ಗಡಾದ, ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ. ರಾಥೋಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಕಳ್ಳತನದ ದೃಶ್ಯವನ್ನು ಎಲ್ಲ ಅಂಗಡಿಗಳಲ್ಲಿಯ ಸಿಸಿ ಕ್ಯಾಮರಾದಲ್ಲಿ ಪರಿಶೀಲನೆ ನಡೆಸಿ, ಸಂಬಂಧಿಸಿದ ವಿಡಿಯೋ ತುಣುಕುಗಳನ್ನು ಪಡೆದುಕೊಂಡು ತನಿಖೆ ಕೈಗೊಂಡಿದ್ದಾರೆ. ಝುರಾಕ್ಸ್ ಅಂಗಡಿಯಲ್ಲಿ, ಮಿಶ್ರಾ ಪೇಡಾ ಅಂಗಡಿಯಲ್ಲಿ ಹಾಗೂ ಸ್ಟೇಷನರಿ ಅಂಡಿಯಲ್ಲಿನ ಗಲ್ಲಾ ಪೆಟ್ಟಿಗೆಯಲ್ಲಿ ಹಣವನ್ನು ಹಾಗೂ ಸಿಹಿ ತಿಂಡಿಗಳನ್ನು, ಕೆಲವು ಅಲಂಕಾರಿಕ ವಸ್ತುಗಳನ್ನು ದೋಚಿದ್ದಾರೆಂದು ತಿಳಿದು ಬಂದಿದೆ. ▸▸3ನೇ ಪುಟಕ್ಕೆ

## ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ದಿ. ಇಂದಿರಾ ಗಾಂಧಿ ಪುಣ್ಯಸ್ಮರಣೆ ನಾಳೆ


■ವಿಜಯಸಾಕ್ಷಿ ಸುದ್ದಿ, ಗದಗ

ಹದಿನೈದು ವರ್ಷ ಪ್ರಧಾನಿಯಾಗಿ, ದೇಶದ ಸರ್ವಾಂಗೀಣ ಅಭಿವೃದ್ಧಿಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದ ದಿ. ಇಂದಿರಾ ಗಾಂಧಿ ಅವರ 41ನೇ ಪುಣ್ಯಸ್ಮರಣೆ ಕಾರ್ಯಕ್ರಮ ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಅ. 31ರಂದು ಬೆಳಿಗ್ಗೆ 10.20ಕ್ಕೆ ಜರುಗಲಿದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಕಾನೂನು, ನ್ಯಾಯ,



ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್. ಪಾಟೀಲ ಭಾಗವಹಿಸುವರು.



ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ, ಪಿ.ಎಲ್.ಡಿ ಬ್ಯಾಂಕ್‌ನ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಕಾಂಗ್ರೆಸ್ ಪ್ರಚಾರ ಸಮಿತಿ, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವಿಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಪಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಅಶೋಕ ಮಂದಾಲಿ ವಿನಂತಿಸಿದ್ದಾರೆ.

> ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಕೃಷ್ಣಗೌಡ ಎಚ್.ಪಾಟೀಲ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

## ಸೆನ್ಸಾರ್‌ಗೆ ಸಿದ್ಧವಾದ 'ಡೆತ್ ಸರ್ಟಿಫಿಕೇಟ್'



■ ವಿಜಯಸಾಕ್ಷಿ ಸುದ್ದಿ, ಮೈಸೂರು

ಚಿರು ಮೀಡಿಯಾ ಹೌಸ್ ಮೈಸೂರು ಅವರ 'ಡೆತ್ ಸರ್ಟಿಫಿಕೆಟ್' ಚಲನಚಿತ್ರ ಪೋಸ್ಟ್ ಪ್ರೊಡಕ್ಷನ್ ಕಾರ್ಯ ಮುಗಿಸಿ ಇದೀಗ ಸೆನ್ಸಾರ್‌ಗೆ ಹೊರಡಲು ಸಿದ್ಧವಾಗಿದೆ.

ಉತ್ತರ ಕರ್ನಾಟಕದ ನೈಜ ಭಾಷೆ, ವಾಸ್ತವಿಕ ಕಥಾಹಂದರ, ಗ್ರಾಮೀಣತೆಯ ಸೊಗಡು, ಮೇಕಪ್ ರಹಿತ ಕಲಾವಿದರು ಮುಂತಾದ ವೈಶಿಷ್ಟಗಳಿಂದ ಕೂಡಿರುವ ಈ ಚಿತ್ರದ ಚಿತ್ರೀಕರಣ ಸಂಪೂರ್ಣವಾಗಿ ಬಾಗಲಕೋಟ ಜಿಲ್ಲೆಯ ಹುನಗುಂದ ತಾಲೂಕಿನ ವೀರಾಪುರ, ನಾಗೂರ ಗ್ರಾಮಗಳಲ್ಲದೆ ಇನ್ನಿತರ ಸ್ಥಳಗಳಲ್ಲಿ ಒಂದೇ ಹಂತದಲ್ಲಿ ಚಿತ್ರೀಕರಣ ಮುಕ್ತಾಯಗೊಳಿಸಲಾಗಿದೆ. ಉತ್ತರಕರ್ನಾಟಕದ ಜನರ ಬದುಕಿನ ನೈಜತೆಯನ್ನುಇಲ್ಲಿ ಚಿತ್ರೀಕರಿಸಿದ್ದೇನೆ ಎಂದು ನಿರ್ದೇಶಕ ಗುರುದತ್ ಮುಸುರಿ ಹೇಳಿದರು.

ಚಿತ್ರೀಕರಣಕ್ಕೆ ವೀರಾಪೂರ ಮತ್ತು ನಾಗೂರ ಗ್ರಾಮಗಳ ಸಮಸ್ತ ಜನತೆ ಸಂಪೂರ್ಣ ಸಹಕಾರ ನೀಡಿದ್ದಾರೆ. ಅವರಿಗೆ ಎಷ್ಟು ಕೃತಜ್ಞತೆ ಹೇಳಿದರೂ ಕಡಿಮೆಯೇಎಂದು ಕಥೆಗಾರ ಹುನಗುಂದದ ಮಹಾಂತೇಶ ಹಳ್ಳೂರ ಹೇಳಿದರು. ಈಗಾಗಲೇ ಬೆಂಗಳೂರಿನ ತಂಡ ಮೂವ್ಹಿ ಮೇಕರ್ಸ್ ಸ್ಟುಡಿಯೋದಲ್ಲಿ ಸಂಪೂರ್ಣ ಪೋಸ್ಟ್ ಪ್ರೊಡಕ್ಷನ್ ಕಾರ್ಯ ಮುಗಿಸಿದೆ. ನೈಜ ಘಟನೆಯನ್ನು ಕಥೆಯಾಗಿ ಬರೆದ ಮಹಾಂತೇಶ ಹಳ್ಳೂರ ಕಥೆ, ಚಿತ್ರಕಥೆ ಸಂಭಾಷಣೆಯನ್ನು ಬರೆದಿದ್ದಾರೆ. ಛಾಯಾಗ್ರಹಣದ ಜೊತೆ ನಿರ್ದೇಶನದ ಹೊಣೆಯನ್ನು ಗುರುದತ್ತ ಮುಸುರಿ ವಹಿಸಿದ್ದಾರೆ. ಸಂಗೀತ ಅಜಿತ್, ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ಸಹನಿರ್ದೇಶನ ಬಸಲಿಂಗಪ್ಪ ತೋಟದ, ಸಹಾಯಕ ನಿರ್ದೇಶನ ಶೇಷಗಿರಿ, ಸಂಕಲನ ಮಲ್ಲಿಕಾರ್ಜುನ, ಪ್ರೊಡಕ್ಷನ್ ಮ್ಯಾನೇಜರ್ ಮಹಾಂತೇಶ ಮಠ, ಸಹ ನಿರ್ಮಾಪಕರಾಗಿ ವಸಂತಾ ಹಳ್ಳೂರ ಕೆಲಸ ಮಾಡಿದ್ದಾರೆ.

ತಾರಾಗಣದಲ್ಲಿ ನಾಯಕ ನಟ ಮನ್ವಿತ್, ವಿಜಯಲಕ್ಷ್ಮೀ, ಮಹಾಂತೇಶ ಹಳ್ಳೂರ, ಬಸಲಿಂಗಪ್ಪ ತೋಟದ, ಜಯದೇವ ಗಂಜಿಹಾಳ, ಪ್ರವೀಣ ಭತ್ತದ, ಬಂಡುಕಟ್ಟಿ, ಡಾ. ಚಂದ್ರನಾಥ ಒಂಟಕುದರಿ, ಮಂಜುಶ್ರೀ ಮಣಿ, ಹನಮಂತ ಮಸ್ಕಿ, ಮಹಾಂತೇಶ ಅಂಗಡಿ, ಮಹಾಂತೇಶ ಮಠ, ಮಹಾಂತೇಶ ಅಗಸಿಮುಂದಿನ, ಮಹಾಂತೇಶ ಅಂಗಡಿ, ನಾಗಪ್ಪ ಪೂಜಾರಿ, ಚಂದ್ರಶೇಖರ ಶಾಸ್ತ್ರಿ, ಸಂಗು ಮಠ, ಬಸನಗೌಡಾ ಹಿರೇಗೌಡ್ರ, ಮಹಾಂತೇಶ ಗಜೇಂದ್ರಗಡ, ವಿನೋದ ಹೂಗಾರ, ಧವಳಚಂದ ಪವಾರ, ಅನಂತ ಬಬಲೇಶ್ವರ, ಗುಡದೂರಕಲ್ಮಠ, ಗುರು ಮಠ, ಭೀಮರಾವ್ ಅಭಿನಯಿಸಿದ್ದಾರೆ.

### 1,32,586 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾದ ಬಗ್ಗೆ ಸರಕಾರಕ್ಕೆ ವರದಿ

# ಪರಿಹಾರ ಪಡೆಯಲು ಎಫ್.ಐ.ಡಿ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ 2025ನೇ ಸಾಲಿನ ಆಗಸ್ಟ್ ಮಾಹೆಯಲ್ಲಿ ಗದಗ ಜಿಲ್ಲೆಯಲ್ಲಿ ಅತಿಯಾದ ಮಳೆಯಾಗಿ ಗದಗ, ಮುಂಡರಗಿ, ನರಗುಂದ, ರೋಣ, ಲಕ್ಷ್ಮೇಶ್ವರ, ಗಜೇಂದ್ರಗಡ ಹಾಗೂ ಶಿರಹಟ್ಟಿ ತಾಲೂಕುಗಳಲ್ಲಿ ಕಟಾವು ಹಂತದಲ್ಲಿದ್ದ ಹೆಸರು, ಗೋವಿನ ಜೋಳ, ಶೇಂಗಾ, ಹತ್ತಿ ಹಾಗೂ ತೋಟಗಾರಿಕೆ ಬೆಳೆಗಳು ಹಾನಿಗೊಳಗಾಗಿವೆವೆ. ಈ ಕುರಿತು ಎನ್.ಡಿ.ಆರ್.ಎಫ್, ಎಸ್.ಡಿಆರ್.ಎಫ್ ಮಾರ್ಗಸೂಚಿಯನ್ವಯ ಕಂದಾಯ, ಕೃಷಿ, ತೋಟಗಾರಿಕೆ ಇಲಾಖೆಯಿಂದ ಜಂಟಿ ಸಮೀಕ್ಷೆ ಕೈಗೊಂಡು ಒಟ್ಟಾರೆಯಾಗಿ 1,32,586 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾದ ಬಗ್ಗೆ ಸರಕಾರಕ್ಕೆ ವರದಿ ಸಲ್ಲಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಬೆಳೆ ನಷ್ಟವಾಗಿರುವ ರೈತರು ಪರಿಹಾರಧನ ಪಡೆಯಲು ಕಡ್ಡಾಯವಾಗಿ ಪ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಸಿ ಎಫ್.ಐ.ಡಿ ಸಂಖ್ಯೆಯನ್ನು ಹೊಂದಿರಬೇಕು ಹಾಗೂ ಎಫ್.ಐ.ಡಿ ಸಂಖ್ಯೆಯೊಂದಿಗೆ ರೈತರು ಹೊಂದಿರುವ ಒಟ್ಟು ಹಿಡುವಳಿ ಪ್ರದೇಶದಎಲ್ಲಾ ಸರ್ವೆ ನಂಬರ್‌ಗಳ ವಿವರಗಳನ್ನು ಸೇರಿಸಬೇಕು. ಎಫ್.ಐ.ಡಿ ಹೊಂದಿರುವ ರೈತರ ವಿವರಗಳನ್ನು ಪರಿಹಾರ ತಂತ್ರಾಂಶದಲ್ಲಿ ದಾಖಲಿಸುವ ಪ್ರಕ್ರಿಯೆ ಪ್ರಾರಂಭವಾಗಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಡಿಬಿಟಿ ಮುಖಾಂತರ ಪರಿಹಾರದ ಮೊತ್ತ ಜಮೆ ಮಾಡಲಾಗುವುದು.

> ಬೆಳೆ ನಷ್ಟವಾಗಿರುವ ರೈತರು ಬೆಳೆಹಾನಿ ಪರಿಹಾರ ಪಡೆಯಲು ಕಡ್ಡಾಯವಾಗಿ ಎಫ್.ಐ.ಡಿಯೊಂದಿಗೆ ತಾವು ಹೊಂದಿರುವ ಎಲ್ಲ ಸಾಗುವಳಿ ಜಮೀನುಗಳನ್ನು ಲಿಂಕ್ ಮಾಡಿಸಬೇಕು. ಎಫ್.ಐ.ಡಿಯಡಿ ದಾಖಲಿಸಿದ ಜಮೀನಿನ ವಿಸ್ತೀರ್ಣಗಳಿಗೆ ಮಾತ್ರ ಸರ್ಕಾರದ ಪರಿಹಾರ ಸೌಲಭ್ಯ ದೊರೆಯುವುದರಿಂದ ರೈತ ಬಾಂಧವರು ತಾವು ಹೊಂದಿರುವ ಎಲ್ಲಾ ಜಮೀನಿನ ಸರ್ವೆ ನಂಬರ್ ವಿಸ್ತೀರ್ಣಗಳನ್ನು ಕೂಡಲೇ ಪ್ರೂಟ್ಸ್ ತಂತ್ರಾಂಶದಲ್ಲಿ ದಾಖಲಿಸಿಕೊಳ್ಳಬೇಕು.

ರೈತರು ಎಫ್.ಐ.ಡಿ ಮಾಡಿಸಿಕೊಳ್ಳಲು ಆಧಾರ್ ಕಾರ್ಡ, ಬ್ಯಾಂಕ್ ಖಾತೆ ಪುಸ್ತಕದ ಪ್ರತಿ, ತಮ್ಮ ಹೆಸರಿನಲ್ಲಿರುವ ಎಲ್ಲ ಜಮೀನುಗಳ ಪಹಣಿ, ತಮ್ಮ ಮೊಬೈಲ್ ಸಂಖ್ಯೆ ಹಾಗೂ ಜಾತಿ ಪ್ರಮಾಣ ಪತ್ರದ ಪ್ರತಿಯೊಂದಿಗೆ ಕಂದಾಯ, ಕೃಷಿ, ತೋಟಗಾರಿ-ಕೆ, ಪಶುಸಂಗೋಪನೆ ಅಥವಾ ಮೀನುಗಾರಿಕೆ ಇಲಾಖೆಯನ್ನು ಸಂಪರ್ಕಿಸಿ, ಎಫ್.ಐ.ಡಿ ಮಾಡಿಕೊಳ್ಳಬಹುದಾಗಿದೆ. ಎಫ್.ಐ.ಡಿ.ಗೆ ಸಂಬಂಧಿಸಿದ ವಿವಾದಗಳನ್ನು ಸರಿಪಡಿಸಿಕೊಳ್ಳಲು 31-10-2025ರೊಳಗಾಗಿ ಸಮೀಪದ ರೈತರ ಸಂಪರ್ಕ ಕೇಂದ್ರ ಹಾಗೂ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗಳಿಗೆ ಕೂಡಲೇ ಭೇಟಿ ನೀಡಬೇಕೆಂದು ಜಂಟಿ ಕೃಷಿ ನಿರ್ದೇಶಕರು ಜಿಲ್ಲೆಯ ರೈತ ಬಾಂಧವರಲ್ಲಿ ವಿನಂತಿಸಿಕೊಂಡಿದ್ದಾರೆ.

## ಮೊಂಥಾ ಚಂಡಮಾರುತ ಪರಿಣಾಮ: 2,000 ಕ್ಕೂ ಹೆಚ್ಚು ಗರ್ಭಿಣಿಯರಿಗೆ ಮಾತೃತ್ವ ಕೇಂದ್ರಗಳಲ್ಲಿ ಆಶ್ರಯ

■ ವಿಜಯಸಾಕ್ಷಿ ಸುದ್ದಿ, ಒಡಿಶಾ

ಮೊಂಥಾ ಚಂಡಮಾರುತದ ನಡುವೆಯೂ ರಾಜ್ಯಾದ್ಯಂತ 2,000 ಕ್ಕೂ ಹೆಚ್ಚು ಗರ್ಭಿಣಿಯರು ಮಾತೃತ್ವ ಕೇಂದ್ರಗಳಲ್ಲಿ ಸುರಕ್ಷಿತವಾಗಿ ಆಶ್ರಯ ಪಡೆದಿದ್ದಾರೆ ಎಂದು ಒಡಿಶಾ ಉಪಮುಖ್ಯಮಂತ್ರಿ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಪ್ರವತಿ ಪರಿದಾ ತಿಳಿಸಿದ್ದಾರೆ.

ಆಶ್ರಯ ಕೇಂದ್ರದ ಸಮಯದಲ್ಲಿ ಹೆರಿಗೆಯಾದ ಎಲ್ಲ ತಾಯಂದಿರು ಮತ್ತು ಅವರ ನವಜಾತ ಶಿಶುಗಳು ಆರೋಗ್ಯವಾಗಿದ್ದಾರೆ, ಇನ್ನೊಂದು ದಿನ ಅವರು ವೈದ್ಯರ ನಿಗಾದಲ್ಲಿ ಇರುತ್ತಾರೆ ಎಂದು ಅವರು ಘೋಷಿಸಿದರು.

"ಈ ಅವಧಿಯಲ್ಲಿ ಹೆರಿಗೆಯಾದ ಎಲ್ಲ ತಾಯಂದಿರು ಮತ್ತು ಅವರ ನವಜಾತ ಶಿಶುಗಳು ಆರೋಗ್ಯವಾಗಿದ್ದಾರೆ ಎಂದು ವರದಿಯಾಗಿದೆ. ಜಿಲ್ಲಾಡಳಿತದ ನೇರ ಮೇಲ್ವಿಚಾರಣೆಯಲ್ಲಿ, ಆರೋಗ್ಯವಂತ ತಾಯಂದಿರು ಮತ್ತು ಶಿಶುಗಳನ್ನು ಸುರಕ್ಷಿತವಾಗಿ ಅವರ ಮನೆಗಳಿಗೆ ಕಳುಹಿಸಲಾಗುತ್ತದೆ" ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

ಮಂಗಳವಾರ ರಾತ್ರಿ ಭೂಕುಸಿತ ಉಂಟುಮಾಡಿದ ಮೊಂಥಾ ಚಂಡಮಾರುತವು ಆಂಧ್ರಪ್ರದೇಶ, ಯಾನನ್ ಕರಾವಳಿಯನ್ನು ಮಚಿಲಿಪಟ್ನಂ ಮತ್ತು ಕಳಿಂಗಪಟ್ನಂ ನಡುವೆ, ಕಾಕಿನಾಡದ ದಕ್ಷಿಣಕ್ಕೆ ದಾಟಿದೆ ಎಂದು ಭಾರತ ಹವಾಮಾನ ಇಲಾಖೆ ತಿಳಿಸಿದೆ.

## ವಕ್ಫ್ ಕಾಯ್ದೆ ವಿರುದ್ಧ ಜಲಗಾಂವ್‌ನಲ್ಲಿ ಬೃಹತ್ 'ಜೈಲ್ ಭರೋ' ಪ್ರತಿಭಟನೆ; ಸಾವಿರಾರು ಜನ ಭಾಗಿ

■ ವಿಜಯಸಾಕ್ಷಿ ಸುದ್ದಿ, ಮುಂಬೈ

ಭಾರತದಾದ್ಯಂತ ಮುಸ್ಲಿಂ ಗುಂಪುಗಳು ಕಪ್ಪು ಕಾನೂನು ಮತ್ತು ಸಮುದಾಯ ದೇಶದ ಸ್ವಾಯತ್ತತೆಯ ಮೇಲಿನ ನೇರ ದಾಳಿ ಎಂದು ಖಂಡಿಸಿರುವ 2025 ರ ವಕ್ಫ್ (ತಿದ್ದುಪಡಿ) ಕಾಯ್ದೆಯನ್ನು ಪ್ರತಿಭಟಿಸಲು ಕಳೆದ ಸೋಮವಾರ ಮಹಾರಾಷ್ಟ್ರದ ಜಲಗಾಂವ್‌ನ ಜಿ.ಎಸ್. ಮೈದಾನದಲ್ಲಿ ಸಾವಿರಾರು ಜನರು ಜಮಾಯಿಸಿದರು.

ತಹಫುಜ್ ಅವ್ಕಾಫ್ ಸಮಿತಿ ಜಲಗಾಂವ್ (ವಕ್ಫ್ ಬಚಾವೊ ಸಮಿತಿ) ಆಯೋಜಿಸಿದ್ದ ಪ್ರತಿಭಟನೆಯಲ್ಲಿ "ಜೈಲ್ ಭ-ರೋ ಆಂದೋಲನ" ಹೆಸರಿನಡಿ ನಡೆಸಲಾಯಿತು. ಇದು ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯ (ಎಐಎಂಪಿಎಲ್‌ಬಿ) ರಾಷ್ಟ್ರವ್ಯಾಪಿ ಮಾರ್ಗಸೂಚಿಯ ಮಾದರಿಯಲ್ಲಿ ಸಾಮೂಹಿಕ ಸ್ವಯಂಪ್ರೇರಿತ ಬಂಧನ ಅಭಿಯಾನವಾಗಿದೆ.

ಅಕ್ಟೋಬರ್ 12 ರಂದು ನವದೆಹಲಿಯ ಜಂತರ್ ಮಂತರ್‌ನಲ್ಲಿ ಎಐಎಂಪಿಎಲ್‌ಬಿ ಯೋಜಿಸಿರುವ ಇದೇ ರೀತಿಯ ಕ್ರಮಕ್ಕೆ ಪೊಲೀಸರು ಅನುಮತಿ ನಿರಾಕರಿಸಿದ ನಂತರ ಪೂರ್ಣ ಪ್ರಮಾಣದ ಜೈಲ್ ಭರೋ ಪ್ರತಿಭಟನೆಯನ್ನು ನಡೆಸಿದ ಮೊದಲ ಜಿಲ್ಲೆ ಜಲಗಾಂವ್ ಎಂದು ಸಂಘಟಕರು ತಿಳಿಸಿದ್ದಾರೆ.


ಎರಡು ಗಂಟೆಗಳ ಕಾಲ ಧರಣಿ ಪ್ರತಿಭಟನೆಯೊಂದಿಗೆ ಹೋರಾಟ ಪ್ರಾರಂಭವಾಯಿತು. ಸುಮಾರು 2,000 ಜನರನ್ನು ಪೊಲೀಸರು ಬಂಧಿಸಿದರು,

# ಗಾಝಾ ಮೇಲೆ 'ಪ್ರಬಲ ದಾಳಿ'ಗೆ ನೆತನ್ಯಾಹು ಆದೇಶ : 30 ಪ್ಯಾಲೆಸ್ತೀನಿಯರನ್ನು ಹತ್ಯೆಗೈದ ಇಸ್ರೇಲ್ ಸೇನೆ

■ ವಿಜಯಸಾಕ್ಷಿ ಸುದ್ದಿ, ಗಾಝಾ

ಈ ಹಿಂದಿನಂತೆ ಗಾಝಾ ಕದನ ವಿರಾಮ ಕೇವಲ ಕಾಗದಕ್ಕೆ ಸೀಮಿತವಾಗಿದ್ದು, ಇಸ್ರೇಲ್ ಬಾಂಬ್ ದಾಳಿ ನಡೆಸಿ ಅಮಾಯಕರ ಹತ್ಯೆಯನ್ನು ಮುಂದುವರಿಸಿದೆ.

ಹಮಾಸ್ ಒಪ್ಪಂದ ಉಲ್ಲಂಘಿಸಿದ ನೆಪ ಹೇಳಿ ಮಂಗಳವಾರ (ಅ.28) ಇಸ್ರೇಲ್ ಗಾಝಾ ಪಟ್ಟಿಯ ವಿವಿಧ ಪ್ರದೇಶಗಳ ಮೇಲೆ ಭೀಕರ ವಾಯದಾಳಿ ನಡೆಸಿದೆ. ಇದರಲ್ಲಿ ಈವರೆಗೆ 30 ಜನರು ಸಾವನ್ನಪ್ಪಿರುವ ಬಗ್ಗೆ ವರದಿಯಾಗಿದೆ.



ತನ್ನ ಪಡೆಗಳ ಮೇಲೆ ಹಮಾಸ್ ನಡೆಸಿದ ದಾಳಿಗೆ ಪ್ರತಿಯಾಗಿ ಈ ದಾಳಿ ನಡೆಸಲಾಗಿದೆ ಎಂದು ಇಸ್ರೇಲ್ ಸೇನೆ ಹೇಳಿದೆ. ಪ್ಯಾಲೆಸ್ತೀನಿಯನ್ ಗುಂಪು ಕದನ ವಿರಾಮವನ್ನು ಉಲ್ಲಂಘಿಸಿದೆ ಎಂದು ಆರೋಪಿಸಿದೆ.

ಮಂಗಳವಾರ ಹಮಾಸ್ ಮತ್ತು ಇಸ್ರೇಲ್ ಸೇನೆ ನಡುವೆ ದಕ್ಷಿಣ ರಫಾದಲ್ಲಿ ಗುಂಡಿನ ಚಕಮಕಿ ನಡೆದಿದೆ ಎಂದು ವರದಿಯಾಗಿದೆ. ಹಮಾಸ್ ರೆಡ್ ಲೇನ್ ದಾಟಿ ಬಂದು ನಮ್ಮ ಪಡೆಗಳ ಮೇಲೆ ಅಪ್ರಚೋದಿತ ಗುಂಡಿನ ದಾಳಿ ಮಾಡಿದೆ ಎಂದು ಇಸ್ರೇಲ್ ಹೇಳಿಕೊಂಡಿದೆ.

ಈ ಗುಂಡಿನ ಚಕಮಕಿ ವರದಿಯ ಬಳಿಕ, ಗಾಝಾ ಮೇಲೆ ಪ್ರಬಲ ದಾಳಿ ನಡೆಸುವಂತೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸೇನೆಗೆ ಆದೇಶಿಸಿದ್ದಾರೆ ಎಂದು ಅವರ ಕಚೇರಿಯ ಪ್ರಕಟಣೆ ತಿಳಿಸಿದೆ.

ನೆತನ್ಯಾಹು ಆದೇಶದ ಬೆನ್ನಲ್ಲೇ ಇಸ್ರೇಲ್ ಸೇನೆ ಗಾಝಾ ಮೇಲೆ ದಾಳಿ ನಡೆಸಿ ನಾಗರಿಕರನ್ನು ಹತ್ಯೆ ಮಾಡಿದೆ. ಹಮಾಸ್ ಪ್ರಕಾಶಮಾನವಾದ ರೆಡ್ ಲೇನ್ ದಾಟಿ ಮುನ್ನುಗ್ಗಿದೆ. ಇದಕ್ಕೆ ಬಲವಾದ ತಿರುಗೇಟನ್ನು ನಾವು ಕೊಡುತ್ತೇವೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹೇಳಿದ್ದಾರೆ.

ಹಮಾಸ್‌ನ ಸಶಸ್ತ್ರ ವಿಭಾಗವಾದ ಕಸ್ಸಮ್ ಬ್ರಿಗೇಡ್ಸ್, ಇಸ್ರೇಲ್ ಕದನ ವಿರಾಮವನ್ನು ಉಲ್ಲಂಘಿಸಿದೆ ಎಂದು ಆರೋಪಿಸಿದೆ. ಕಾಣೆಯಾದ ಒತ್ತೆಯಾಳುಗಳ ಶವದ ಹಸ್ತಾಂತರವನ್ನು ಮುಂದೂಡುವುದಾಗಿ ಹೇಳಿದೆ.

ಇಸ್ರೇಲ್ ದಾಳಿ ನಡೆಸುತ್ತಿರುವುದರಿಂದ ಕಟ್ಟಡಗಳ ಅವಶೇಷಗಳಡಿ ಹುದುಗಿರುವ ಇಸ್ರೇಲಿ ಒತ್ತೆಯಾಳುಗಳ ಶವಗಳ ಹುಡುಕಾಟಕ್ಕೆ ಅಡ್ಡಿಯಾಗಿದೆ. ಇದರಿಂದ ಶವಗಳ ವಿಳಂಬವಾಗಲಿದೆ ಎಂದು ಹಮಾಸ್ ತಿಳಿಸಿದೆ.

ಎರಡೂ ಕಡೆಗಳಿಂದ ಕದನ ವಿರಾಮ ಉಲ್ಲಂಘನೆ ಆರೋಪಗಳು ಕೇಳಿ ಬಂದರೂ, ಗಾಝಾ ಕದನ ವಿರಾಮ ಇನ್ನೂ ಚಾಲ್ತಿಯಲ್ಲಿದೆ ಎಂದು ಯುಎಸ್ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ವಾಷಿಂಗ್ಟನ್ ಡಿಸಿಯಲ್ಲಿ ಹೇಳಿದ್ದಾರೆ. "ಕದನ ವಿರಾಮ ಎಂದರೆ ಅಲ್ಲಲ್ಲಿ ಸಣ್ಣಪುಟ್ಟ ಗುಂಡಿನ ಚಕಮಕಿಗಳು ನಡೆಯುವುದಿಲ್ಲ ಎಂದರ್ಥವಲ್ಲ" ಎಂದು ವ್ಯಾನ್ಸ್ ಕ್ಯಾಪಿಟಲ್ ಹಿಲ್‌ನಲ್ಲಿ ಸುದ್ದಿಗಾರರಿಗೆ ತಿಳಿಸಿದ್ದಾರೆ.

# ಬಿಹಾರ ವಿಧಾನಸಭೆ ಚುನಾವಣೆ : ಮಹಾಘಟಬಂಧನ್ ಪ್ರಣಾಳಿಕೆ ಬಿಡುಗಡೆ



■ ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರದ ವಿರೋಧ ಪಕ್ಷಗಳ 'ಮಹಾಘಟಬಂಧನ್' ಮೈತ್ರಿಕೂಟವು ಮುಂಬರುವ ವಿಧಾನಸಭಾ ಚುನಾವಣೆಗೆ ಮಂಗಳವಾರ (ಅ.28) ತನ್ನ ಜಂಟಿ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದು, ಮಹಿಳೆಯರಿಗೆ ಆರ್ಥಿಕ ನೆರವು, ಸರ್ಕಾರಿ ಉದ್ಯೋಗ ಸೇರಿದಂತೆ ಭರಪೂರ ಭರವಸೆಗಳನ್ನು ನೀಡಿದೆ.

ಸರ್ಕಾರ ರಚನೆಯಾದ 20 ದಿನಗಳಲ್ಲಿ ಪ್ರತಿ ಕುಟುಂಬದ ಒಬ್ಬ ಸದಸ್ಯನಿಗೆ ಉದ್ಯೋಗ, ಪ್ರತಿ ಮನೆಗೆ 200 ಯೂನಿಟ್ ಉಚಿತ ವಿದ್ಯುತ್ ಮತ್ತು ಮಹಿಳೆಯರಿಗೆ ಮಾಸಿಕ 2,500 ರೂ. ಆರ್ಥಿಕ ನೆರವು ಪ್ರಣಾಳಿಕೆಯಲ್ಲಿ ಪ್ರಮುಖ ಅಂಶಗಳಾಗಿವೆ.

ಹಳೆಯ ಪಿಂಚಣಿ ಯೋಜನೆಯ (ಒಪಿಎಸ್) ಅನುಷ್ಠಾನದ ಭರವಸೆಯನ್ನು ಕೂಡ ಪ್ರಣಾಳಿಕೆ ನೀಡಿದೆ.


ಮಹಾಘಟಬಂಧನ್‌ನ ಮುಖ್ಯಮಂತ್ರಿ ಅಭ್ಯರ್ಥಿಯಾಗಿ ತೇಜಸ್ವಿ ಯಾದವ್ ಅವರನ್ನು ಘೋಷಿಸಿದ ಬೆನ್ನಲ್ಲೇ, ಪ್ರಣಾಳಿಕೆಯನ್ನು ಬಿಡುಗಡೆ ಮಾಡಲಾಗಿದೆ. ವಿಕಾಸ್‌ಶೀಲ್ ಇನ್ಸಾನ್ ಪಕ್ಷದ ಮುಖ್ಯಸ್ಥ ಮುಖೇಶ್ ಸಹಾನಿ ಅವರನ್ನು ಮಹಾ ಮೈತ್ರಿಕೂಟದ ಉಪಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಣೆ ಮಾಡಲಾಗಿದೆ.

ಬಿಹಾರದ ಆಡಳಿತಾರೂಢ ಎನ್‌ಡಿಎ ಅಕ್ಟೋಬರ್ 30 ರಂದು ವಿಧಾನಸಭಾ ಚುನಾವಣೆಗೆ ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡುವ ಸಾಧ್ಯತೆಯಿದೆ.

## ಪರೇಶ್ ರಾವಲ್ ಅವರ 'ದಿ ತಾಜ್ ಸ್ಟೋರಿ' ವಿರುದ್ಧ ದೆಹಲಿ ಹೈಕೋರ್ಟ್ ನಲ್ಲಿ ಅರ್ಜಿ ಸಲ್ಲಿಕೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪರೇಶ್ ರಾವಲ್ ಅವರ ಮುಂಬರುವ ಚಿತ್ರ 'ದಿ ತಾಜ್ ಸ್ಟೋರಿ' ಕೋಮು ಸಾಮರಸ್ಯವನ್ನು ಹಾಳು ಮಾಡುತ್ತದೆ ಎಂದು ಆರೋಪಿಸಿ ದೆಹಲಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಗಿದೆ.



ಈಗಾಗಲೇ ವಿವಾದಾತ್ಮಕ ಪೋಸ್ಟರ್ ಬಿಡುಗಡೆ ಮಾಡಿ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದ್ದ 'ದಿ ತಾಜ್ ಸ್ಟೋರಿ' ಚಿತ್ರದ ವಿರುದ್ಧ ಐತಿಹಾಸಿಕ ಸಂಗತಿಗಳನ್ನು ವಿರೂಪಗೊಳಿಸಿದೆ ಮತ್ತು ಕೋಮು ಸಾಮರಸ್ಯವನ್ನು ಕದಡಬಹುದು ಎಂದು ಆರೋಪಿಸಿ, ಅದರ ಬಿಡುಗಡೆಯ ವಿರುದ್ಧ ರಕ್ಷಣೆ ಕೋರಿ ದೆಹಲಿ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ (ಪಿಐಎಲ್) ಸಲ್ಲಿಸಲಾಗಿದೆ.

ವಕೀಲ ಶಕೀಲ್ ಅಬ್ಬಾಸ್ ಸಲ್ಲಿಸಿರುವ ಅರ್ಜಿಯಲ್ಲಿ, ಅಕ್ಟೋಬರ್ 31 ರಂದು ರಾಷ್ಟ್ರವ್ಯಾಪಿ ಬಿಡುಗಡೆಯಾಗಲಿರುವ ಈ ಚಿತ್ರವು "ಸಂಪೂರ್ಣವಾಗಿ ಕಲ್ಪಿತ ಸಂಗತಿಗಳನ್ನು ಆಧರಿಸಿದೆ" ಮತ್ತು "ಭಾರತದ ವಿವಿಧ ಸಮುದಾಯಗಳ ನಡುವೆ ಕೋಮು ಗಲಭೆಯನ್ನು ಸೃಷ್ಟಿಸುವ ಒಂದು ಹೆಜ್ಜೆ" ಎಂದು ವಾದಿಸಲಾಗಿದೆ.

"ಚಿತ್ರದ ಟೀಸರ್ ಮತ್ತು ಪ್ರಚಾರದ ಪೋಸ್ಟರ್‌ಗಳು ತಾಜ್ ಮಹಲ್ ಗುಮ್ಮಟವನ್ನು ಎತ್ತಿ ಅದರಿಂದ ಹೊರಹೊಮ್ಮುವ ಶಿವನ ಆಕೃತಿಯನ್ನು ಬಹಿರಂಗಪಡಿಸುವ ಚಿತ್ರಣವನ್ನು ತೋರಿಸುತ್ತವೆ. ಈ ಅಂಶಗಳು ಕೋಮು ಸಾಮರಸ್ಯ ಮತ್ತು ಐತಿಹಾಸಿಕ ಹಕ್ಕುಗಳ ಸತ್ಯಾಸತ್ಯತೆಯ ಬಗ್ಗೆ ಸಾಕಷ್ಟು ಸಾರ್ವಜನಿಕ ಚರ್ಚೆ ಮತ್ತು ಕಳವಳವನ್ನು ಹುಟ್ಟುಹಾಕಿವೆ" ಎಂದು ಅರ್ಜಿಯಲ್ಲಿ ತಿಳಿಸಲಾಗಿದೆ.


ಅರ್ಜಿದಾರರು ಭಾರತ ಒಕ್ಕೂಟ, ಕೇಂದ್ರ ಚಲನಚಿತ್ರ ಪ್ರಮಾಣೀಕರಣ ಮಂಡಳಿ (ಅಃಈಅ), ಚಿತ್ರದ ನಿರ್ಮಾಪಕರು, ಸ್ವರ್ಣಿಮ್ ಗ್ಲೋಬಲ್ ಸರ್ವಿಸಸ್ ಪ್ರೈವೇಟ್ ಲಿಮಿಟೆಡ್, ನಿರ್ಮಾಪಕ ಸಿಎ ಸುರೇಶ್ ಝಾ, ನಿರ್ದೇಶಕ ತುಷಾರ್ ಅಮರೀಶ್ ಗೋಯೆಲ್, ಬರಹಗಾರ ಸೌರಭ್ ಎಂ ಪಾಂಡೆ, ಜೀ ಮ್ಯೂಸಿಕ್ ಕಂಪನಿ ಮತ್ತು ನಟ ಪರೇಶ್ ರಾವಲ್ ಅವರನ್ನು ಪ್ರತಿವಾದಿಗಳನ್ನಾಗಿ ಮಾಡಿದ್ದಾರೆ.

## ವ್ಯಾಪಾರ ಒತ್ತಡ ಹಾಕಿ ಭಾರತ-ಪಾಕಿಸ್ತಾನ ಯುದ್ಧ ನಿಲ್ಲಿಸಿದೆ : ಪುನರುಚ್ಚರಿಸಿದ ಟ್ರಂಪ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತ- ಪಾಕಿಸ್ತಾನದ ಮೇಲೆ ವ್ಯಾಪಾರ ಒತ್ತಡವನ್ನು ಹೆಚ್ಚಿಸುವ ಮೂಲಕ ಉಭಯ ರಾಷ್ಟ್ರಗಳ ನಡುವಿನ ಯುದ್ಧವನ್ನು ತಪ್ಪಿಸಿದೆ ಎಂಬ ತಮ್ಮ ಹೇಳಿಕೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬುಧವಾರ (ಅ.29) ಪುನರುಚ್ಚರಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿಯವರನ್ನು 'ಅತ್ಯಂತ ಸುಂದರ' ಮತ್ತು 'ಕಠಿಣ ವ್ಯಕ್ತಿ' ಎಂದು ಹೊಗಳಿದ ಟ್ರಂಪ್, ಅಮೆರಿಕ ಅಧ್ಯಕ್ಷರು ಪ್ರಧಾನಿಗೆ ಕರೆ ಮಾಡಿ ಮಾತನಾಡಿದ ಎರಡು ದಿನಗಳಲ್ಲಿ ಭಾರತ ಒತ್ತಡಕ್ಕೆ ಮಣಿದು ಯುದ್ಧವನ್ನು ನಿಲ್ಲಿಸಿತು ಎಂದು ಹೇಳಿದ್ದಾರೆ.



"ಪ್ರಧಾನಿ ಮೋದಿ ಅತ್ಯಂತ ಸುಂದರ ವ್ಯಕ್ತಿ. ಅವರೊಬ್ಬ ಕಿಲ್ಲರ್ ಮತ್ತು ಕಠಿಣ ವ್ಯಕ್ತಿ. ಅವರು ಹೋರಾಡುತ್ತೇವೆ ಎಂದರು, ಆಗ ನಾನು ವಾವ್, ಇದು ನನಗೆ ಗೊತ್ತಿರುವ ಅದೇ ವ್ಯಕ್ತಿನಾ? ಅಂದೆ" ಎಂದು ದಕ್ಷಿಣ ಕೊರಿಯಾದ ಜಿಯೊಂಗ್ಜುನಲ್ಲಿ ನಡೆದ ಎಪಿಇಸಿ (ಏಷ್ಯಾ-ಪೆಸಿಫಿಕ್ ಆರ್ಥಿಕ ಸಹಕಾರ) ಸಿಇಒ ಶೃಂಗಸಭೆಯಲ್ಲಿ ಟ್ರಂಪ್ ಹೇಳಿದ್ದಾರೆ.

ಪಾಕಿಸ್ತಾನದ ಫೀಲ್ಡ್ ಮಾರ್ಷಲ್ ಆಸಿಮ್ ಮುನೀರ್ ಅವರನ್ನೂ ಹೊಗಳಿದ ಟ್ರಂಪ್, ಅವರನ್ನು 'ಶ್ರೇಷ್ಠ ಹೋರಾಟಗಾರ' ಎಂದು ಕರೆದಿದ್ದಾರೆ.

"ಪಾಕಿಸ್ತಾನದ ಪ್ರಧಾನಿ ಒಬ್ಬ ಮಹಾನ್ ವ್ಯಕ್ತಿ. ಅವರ ಬಳಿ ಫೀಲ್ಡ್ ಮಾರ್ಷಲ್ ಇದ್ದಾರೆ. ಅವರು ಫೀಲ್ಡ್ ಮಾರ್ಷಲ್ ಯಾಕೆ ಅಂತ ನಿಮಗೆ ಗೊತ್ತಾ? ಅವರು ಒಬ್ಬ ಮಹಾನ್ ಹೋರಾಟಗಾರ. ಹಾಗಾಗಿ, ನನಗೆ ಅವರೆಲ್ಲರ ಪರಿಚಯವಿದೆ" ಎಂದು ಟ್ರಂಪ್ ಹೇಳಿದ್ದಾರೆ.

"ಇಬ್ಬರು ಪರಮ ಶತ್ರುಗಳ ನಡುವಿನ ಯುದ್ಧವನ್ನು ನಿಲ್ಲಿಸಿದ್ದೇನೆ ಎಂಬ ತನ್ನ ಹೇಳಿಕೆಯನ್ನು ಪುನರಾವರ್ತಿಸಿದ ಟ್ರಂಪ್, "ಇವು ಎರಡು ಪರಮಾಣು ರಾಷ್ಟ್ರಗಳು. ಅವರು ನಿಜವಾಗಿಯೂ ಅದನ್ನು ಬಳಸಲು ಹೊರಟಿದ್ದರು. ನಾನು ಪ್ರಧಾನಿ ಮೋದಿಯವರಿಗೆ ಕರೆ ಮಾಡಿ, ನಾವು ನಿಮ್ಮೊಂದಿಗೆ ವ್ಯಾಪಾರ ಒಪ್ಪಂದ ಮಾಡಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದೆ. ಅದಕ್ಕವರು, ಇಲ್ಲ, ಇಲ್ಲ, ನಾವು ವ್ಯಾಪಾರ ಒಪ್ಪಂದ ಮಾಡಿಕೊಳ್ಳಬೇಕು ಎಂದರು. ನಾನು, ಇಲ್ಲ ನಮಗೆ ಸಾಧ್ಯವಿಲ್ಲ ಎಂದು ಮತ್ತೆ ಹೇಳಿದೆ. ನೀವು ಪಾಕಿಸ್ತಾನದೊಂದಿಗೆ ಯುದ್ಧವನ್ನು ಪ್ರಾರಂಭಿಸುತ್ತಿದ್ದೀರಿ ಎಂದೆ. ತದನಂತರ ನಾನು ಪಾಕಿಸ್ತಾನಕ್ಕೆ ಕರೆ ಮಾಡಿ, ನೀವು ಭಾರತದೊಂದಿಗೆ ಹೋರಾಡುತ್ತಿರುವುದರಿಂದ ನಾವು ನಿಮ್ಮೊಂದಿಗೆ ವ್ಯಾಪಾರ ಮಾಡುವುದಿಲ್ಲ ಎಂದು ಹೇಳಿದೆ. ಅವರು, 'ಇಲ್ಲ, ಇಲ್ಲ ನೀವು ನಮಗೆ ಹೋರಾಡಲು ಬಿಡಬೇಕು' ಎಂದರು. ಅವರಿಬ್ಬರೂ ಹಾಗೆ ಹೇಳಿದರು, ಅವರು ಬಲಿಷ್ಠ ಜನರು" ಎಂದಿದ್ದಾರೆ.

ಭಾರತ ಮತ್ತು ಪಾಕಿಸ್ತಾನ ಎರಡೂ ನಾಯಕರು ಎರಡು ದಿನಗಳ ನಂತರ ತನಗೆ ಕರೆ ಮಾಡಿ ಹೋರಾಟ ನಿಲ್ಲಿಸಿದರು ಎಂದು ಟ್ರಂಪ್ ಹೇಳಿಕೊಂಡಿದ್ದಾರೆ.

"ಎರಡು ದಿನದ ಬಳಿಕ ಅವರು ನನಗೆ ಕರೆ ಮಾಡಿ ಯುದ್ಧ ನಿಲ್ಲಿಸಿದ್ದೇವೆ, ನಮಗೆ ಅರ್ಥವಾಯಿತು ಎಂದು ಹೇಳಿದರು. ಇದು ಹೇಗೆ ಸಾಧ್ಯ? ಎಷ್ಟು ಅದ್ಭುತವಲ್ಲವೇ? ಬೈಡೆನ್ ಹೀಗೆ ಮಾಡುತ್ತಿದ್ದರು ಎಂದು ನೀವು ಭಾವಿಸುತ್ತೀರಾ?" ಎಂದು ಟ್ರಂಪ್ ಪ್ರಶ್ನಿಸಿದ್ದಾರೆ.

ಇದಕ್ಕೂ ಕೆಲವು ಗಂಟೆಗಳ ಮೊದಲು ಟೋಕಿಯೊದಲ್ಲಿ ಮಾತನಾಡಿದ್ದ ಟ್ರಂಪ್, "24 ಗಂಟೆಗಳಲ್ಲಿ ಯುದ್ಧ ನಿಲ್ಲಿಸುವಲ್ಲಿ ಯಶಸ್ವಿಯಾದೆ" ಎಂದು ಹೇಳಿದ್ದರು.

ಮಂಗಳವಾರ ಟೋಕಿಯೊದಲ್ಲಿ ವ್ಯಾಪಾರ ನಾಯಕರೊಂದಿಗೆ ನಡೆದ ಭೋಜನಕೂಟದಲ್ಲಿ ಮಾತನಾಡಿದ್ದ ಟ್ರಂಪ್, "ಭಾರತ-ಪಾಕಿಸ್ತಾನ ಸಂಘರ್ಷದ ಸಮಯದಲ್ಲಿ 'ಏಳು ಹೊಚ್ಚ ಹೊಸ' ವಿಮಾನಗಳನ್ನು ಹೊಡೆದುರುಳಿಸಲಾಯಿತು ಎಂದಿದ್ದರು. ಅವು ಯಾವ ದೇಶಕ್ಕೆ ಸೇರಿದವು ಎಂಬುದನ್ನು ಸ್ಪಷ್ಟಪಡಿಸಿಲ್ಲ.

## ಪುನೀತ್ ರಾಜಕುಮಾರ ಪುಣ್ಯತಿಥಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕನ್ನಡದ ಖ್ಯಾತ ನಟ ಪುನೀತ್ ರಾಜಕುಮಾರ ಅವರ ಪುಣ್ಯತಿಥಿ ಅಂಗವಾಗಿ ಡಾ ಎ.ಪಿ.ಜೆ. ಅಬ್ದುಲ್ ಕಲಾಂ ಯೂಥ್ ಫೆಡರೇಶನ್ ಆಫ್ ಇಂಡಿಯಾ ಸಂಘಟನೆಯವರು ಇಲ್ಲಿಯ 14 ಅಂಗನವಾಡಿ ಕೇಂದ್ರಗಳಿಗೆ ಸ್ಲೇಟ್, ಬಳಪ ವಿತರಿಸಿದರು.

ಪುನೀತ್ ರಾಜಕುಮಾರ ಅವರ ಭಾವಚಿತ್ರಕ್ಕೆ ಮೇಣದ ಬತ್ತಿ ಬೆಳಗುವ ಮೂಲಕ ಶ್ರದ್ಧಾಂಜಲಿ ಅರ್ಪಿಸಲಾಯಿತು. ಸಂಘಟನೆಯ ಸಂಸ್ಥಾಪಕ ಅಮೃತ ಮಂಟೂರ ಪುನೀತ್ ರಾಜಕುಮಾರ ಅವರ ನಟನೆ, ಸಮಾಜಮುಖಿ ಕಾರ್ಯಗಳ ಕುರಿತು ಮಾತನಾಡಿದರು. ಅಂಗನವಾಡಿ ಮೇಲ್ವಿಚಾರಕಿ ಶಾಹೀದಬೇಗಂ ಹತ್ತಿವಾಲೆ ಅವರು ಅಬ್ದುಲ್ ಕಲಾಂ ಯೂಥ್ ಫೇಡರೇಶನ್‌ನ ಅಮೃತ ಮಂಟೂರ ಅವರ ಸಮಾಜಮುಖಿ ಕಾರ್ಯಗಳು ಶ್ಲಾಘನೀಯ ಎಂದರು.

ಸಮಾಜ ಸೇವಕ ಮರಿಯಪ್ಪ ವಡ್ಡರ, ಈಶ್ವರಪ್ಪ ಕುಂಬಾರ, ವೀರಭದ್ರಪ್ಪ ಕುಂಬಾರ, ಯಲ್ಲಪ್ಪಗೌಡ ಮಲ್ಲಾಪೂರ, ಅಂಬರೀಶ ಕುಂಬಾರ, ಈರಣ್ಣ ಕುಂಬಾರ, ನಾಗಪ್ಪ ಕುಂಬಾರ, ವಿಜಯಕುಮಾರ ಮಾಲ್ವಿ ಹಾಗೂ ಅಂಗನವಾಡಿ ಕಾರ್ಯಕರ್ತರು ಹಾಜರಿದ್ದರು.

ಲಕ್ಕಲಕಟ್ಟಿ ತಾಂಡಾ ಭೇಟಿ ವೇಳೆ ಅಧಿಕಾರಿಗಳಿಗೆ ತಾ.ಪಂ ಇಒ ಚಂದ್ರಶೇಖರ ಕಂದಕೂರ ತಾಕೀತು

# ನಿರಂತರ ವಿದ್ಯುತ್ ಸಂಪರ್ಕ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ತಾಂಡಾ ನಿವಾಸಿಗಳಿಗೆ ಮೂಲಭೂತ ಸೌಲಭ್ಯಗಳ ಪೂರೈಕೆಯಲ್ಲಿ ಯಾವುದೇ ಲೋಪ-ದೋಷಗಳಾಗದಂತೆ ನೋಡಿಕೊಳ್ಳಿ ಎಂದು ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ತಾಕೀತು ಮಾಡಿದರು.

ತಾಂಡಾ ನಿವಾಸಿಗಳು ದೂರವಾಣಿ ಕರೆ ಮಾಡಿ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ ಗಜೇಂದ್ರಗಡ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಲಕ್ಕಲಕಟ್ಟಿ ತಾಂಡಾಕ್ಕೆ ಭೇಟಿ ನೀಡಿ ತಾಂಡಾ ಗ್ರಾಮಸ್ಥರ ಜೊತೆ



ಸಮಾಲೋಚನೆ ನಡೆಸಿ ಸಮಸ್ಯೆ ಆಲಿಸಿದರು.

ಲಕ್ಕಲಕಟ್ಟಿ ತಾಂಡಾದಲ್ಲಿ 50ಕ್ಕೂ ಅಧಿಕ ಕುಟುಂಬಗಳಿದ್ದು, ತಾಂಡಾದಲ್ಲಿ ನಿರಂತರ ವಿದ್ಯುತ್ ಸಂಪರ್ಕಕ್ಕೆ ಗ್ರಾಮಸ್ಥರು ಮನವಿ ಮಾಡಿದರು. ಮನವಿಗೆ ಸ್ಪಂದಿಸಿದ ಇಒ ಅವರು, ಸ್ಥಳದಲ್ಲೇ ಸಂಬಂಧಿಸಿದ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ನಿರಂತರ ವಿದ್ಯುತ್ ಸಂಪರ್ಕ ಇಲ್ಲದೇ ತಾಂಡಾ ನಿವಾಸಿಗಳು ಸಂಕಷ್ಟ ಎದುರಿಸುತ್ತಿದ್ದು, ನಿರಂತರ ವಿದ್ಯುತ್ ಸಂಪರ್ಕ ನೀಡಿ ಸಮಸ್ಯೆ ಬಗೆಹರಿಸುವಂತೆ ಸೂಚಿಸಿದರು.

ನರೇಗಾ ಕಾಮಗಾರಿಗಳಲ್ಲಿ ಕೆಲಸ ಮಾಡಲು ಕೂಲಿಕಾರರಿಗೆ ಕೇಂದ್ರ ಸರ್ಕಾರ ಇ-ಕೆವೈಸಿ ಮಾಡಿಸುವುದು ಕಡ್ಡಾಯಗೊಳಿಸಿದೆ. ಅಕ್ಟೋಬರ್ 31ರೊಳಗಾಗಿ ತಾಂಡಾದ ನರೇಗಾ ಕೂಲಿಕಾರರೆಲ್ಲರೂ

ತಾಂಡಾಕ್ಕೆ ಸಮರ್ಪಕ ಕುಡಿಯುವ ನೀರು ಹಾಗೂ ತಾಂಡಾದಲ್ಲಿ ಸ್ವಚ್ಛತಾ ಕಾರ್ಯಗಳನ್ನು ನಿರಂತರವಾಗಿ ಕೈಗೊಂಡು ತಾಂಡಾದ ವಾತಾವರಣ ಸ್ವಚ್ಛಂದವಾಗಿಟ್ಟುಕೊಳ್ಳುವಂತೆ ಶ್ರಮಿಸಬೇಕೆಂದು ಇಒ ಚಂದ್ರಶೇಖರ ಕಂದಕೂರ ಸ್ಥಳದಲ್ಲಿದ್ದ ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

ಇ-ಕೆವೈಸಿ ಮಾಡಿಸಿಕೊಳ್ಳಬೇಕು. ತಾಂಡಾ ನಿವಾಸಿಗಳು ಇ-ಕೆವೈಸಿ ಮಾಡಿಸಿಕೊಂಡು ನರೇಗಾ ಯೋಜನೆ ಸದುಪಯೋಗ ಪಡೆಯಿರಿ. ಇಲ್ಲವೇ ನರೇಗಾ ಉದ್ಯೋಗ ಚೀಟಿ ರದ್ದಾಗುವ ಸಾಧ್ಯತೆ ಹೆಚ್ಚು ಎಂದು ತಾಂಡಾ ನಿವಾಸಿಗಳಿಗೆ ತಿಳುವಳಿಕೆ ಮೂಡಿಸಿದರು. ಇಒ ಚಂದ್ರಶೇಖರ ಕಂದಕೂರ ಅವರೇ ಸ್ವತಃ ತಾಂಡಾ ನಿವಾಸಿಗಳ ಇ-ಕೆವೈಸಿ ಮಾಡುವ ಮೂಲಕ ಕೂಲಿಕಾರರಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಲಕ್ಕಲಕಟ್ಟಿ ಗ್ರಾ.ಪಂ ಪಿಡಿಒ ಶಿವಯೋಗಿ ರಿತ್ತಿ, ಕಾರ್ಯದರ್ಶಿ ಶರಣಪ್ಪ ಮೇಟಿ, ತಾಂಡಾ ರೋಜಗಾರ ಮಿತ್ರ ಸಕ್ಕುಬಾಯಿ ರಾಥೋಡ, ಗ್ರಾಮ ಕಾಯಕ ಮಿತ್ರ ಸುಜಾತ ಮ್ಯಾಗೇರಿ ಹಾಗೂ ಗ್ರಾ.ಪಂ ಸಿಬ್ಬಂದಿ ವರ್ಗದವರು ಹಾಜರಿದ್ದರು. ಇದೇ ವೇಳೆ ತಾಂಡಾದಲ್ಲಿ ಬಾಕಿ ಇರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಬುಧವಾರ ಸಾಯಂಕಾಲದೊಳಗಾಗಿ ಪೂರ್ಣಗೊಳಿಸಬೇಕೆಂದು ಸಿಬ್ಬಂದಿಗೆ ಇಒ ಚಂದ್ರಶೇಖರ ಕಂದಕೂರ ಅವರು ಸೂಚಿಸಿದರು.

# ವ್ಯಕ್ತಿಯ ಸಾವಿನ ತನಿಖೆ ನಡೆಸಲು ಆಗ್ರಹ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬೆಳ್ಳಟ್ಟಿ ಗ್ರಾಮದ ಚರ್ಚ್‌ನಲ್ಲಿ ಮತಾಂತರಗೊಳ್ಳಲು ನಿರಾಕರಿಸಿದ ಭೋವಿ ಸಮಾಜದ ವ್ಯಕ್ತಿಯ ಸಾವಿನ ಸಮಗ್ರ ತನಿಖೆ ನಡೆಸುವಂತೆ ಆಗ್ರಹಿಸಿ ಬುಧವಾರ ಶಿರಹಟ್ಟಿಯಲ್ಲಿ ಹಿಂದೂಪರ ಸಂಘಟನೆಗಳ ಒಕ್ಕೂಟದ ವತಿಯಿಂದ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆಯ ತಾಲೂಕಾಧ್ಯಕ್ಷ ಸಂತೋಷ ಕುರಿ, ಕಳೆದ ಮೂರು ವರ್ಷಗಳಲ್ಲಿ ಕ್ರಿಶ್ಚಿಯನ್ನರು ಮುಗ್ಧ ಹಿಂದೂಗಳಿಗೆ ಆಮಿಷವೊಡ್ಡಿ ಮತಾಂತರ ಮಾಡುತ್ತಿದ್ದಾರೆ. ಭೋವಿ ಸಮಾಜದ ವ್ಯಕ್ತಿಯ ಶವ ನಿಗೂಢವಾಗಿ ನೇಣು ಬಿಗಿದ ಸ್ಥಿತಿಯಲ್ಲಿ ದೊರೆತಿದೆ. ಈ ವ್ಯಕ್ತಿಯ ಕುಟುಂಬದ ಸದಸ್ಯರನ್ನು ಈಗಾಗಲೇ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಳಿಸಲಾಗಿದೆ. ಅ. 27ರಂದು ತಿಪ್ಪಣ್ಣ ಚಂದ್ರಪ್ಪ ವಡ್ಡರ ಯಾವದೇ ಆಮಿಷಗಳಿಗೆ ಬಗ್ಗದಿರುವುದನ್ನು ಮನಗಂಡು ಚರ್ಚ್‌ನ ಅಧಿಕಾರಿಗಳು ಆತನನ್ನು ಕರೆತಂದು ವಿವಿಧ ರೀತಿಯ ಚಿತ್ರಹಿಂಸೆ ನೀಡಿ ಕೊಲೆ ಮಾಡಿ ನೇಣು ಹಾಕಿಕೊಂಡಂತೆ ಸನ್ನಿವೇಶ ಸೃಷ್ಟಿಸಿದ್ದು, ಡೆತ್‌ನೋಟನ್ನು ಶಿರಹಟ್ಟಿ ಪೋಲೀಸ್ ಠಾಣೆಯ ಪೇದೆಯೊಬ್ಬರು ತೆಗೆದುಕೊಂಡು ಹೋಗಿದ್ದಾರೆ ಈ ಬಗ್ಗೆ ಸಮಗ್ರ ತನಿಖೆಯಾಗಬೇಕು. ತಪ್ಪಿತಸ್ಥರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಮೃತ ಕುಟುಂಬಕ್ಕೆ 50ಲಕ್ಷ ಪರಿಹಾರ ನೀಡಬೇಕು ಎಂದು ತಿಳಿಸಿದರು

ಈ ಸಂದರ್ಭದಲ್ಲಿ ವೀರಣ್ಣ ಅಂಗಡಿ, ಪರಶುರಾಮ ಡೊಂಕಬಳ್ಳಿ, ಯಲ್ಲಪ್ಪ ಇಂಗಳಗಿ, ಪ್ರಕಾಶ ಶಿರಹಟ್ಟಿ, ಮುತ್ತು ಆಕಳದ, ಮುತ್ತು ಬೂದಿಹಾಳ, ಆನಂದ ಸತ್ಯಮ್ಮನವರ, ಗೌತಮ ಹಳ್ಳೆಮ್ಮನವರ, ದೇವಪ್ಪ ಪೂಜಾರ, ಮಂಜುನಾಥ ಸೊಂಟನೂರ, ನಾಗರಾಜ ಇಂಗಳಗಿ ಮುಂತಾದವರು ಉಪಸ್ಥಿತರಿದ್ದರು.


ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದಲ್ಲಿ ಯುವಕರಿಗಾಗಿ ವೃತ್ತಿ ಕೌಶಲ್ಯ ತರಬೇತಿ ಕಾರ್ಯಾಗಾರ

# ದುಶ್ಚಟಗಳಿಂದ ದೂರವಿದ್ದರೆ ಏಳಿಗೆ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ನೆಹರು ಯುವ ಕೇಂದ್ರ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ, ಲಾಯನ್ಸ್ ಶಿಕ್ಷಣ ಸಂಸ್ಥೆ ಹಾಗೂ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯ ಗದಗ ಇವರುಗಳ ಸಹಯೋಗದಲ್ಲಿ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಯುವಕರಿಗಾಗಿ ವೃತ್ತಿ ಕೌಶಲ್ಯ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ನಿಮ್ಹಾನ್ಸ್‌ನ ಕ್ಲಿನಿಕಲ್ ಸೈಕಾಲಜಿಸ್ಟ್ ಡಾ. ನಾಗರಾಜ್ ಮಾತನಾಡಿ, ಇಂದಿನ ಯುವಕರು ದುಶ್ಚಟಗಳಿಂದ ದೂರವಿದ್ದು, ಮೊಬೈಲನ್ನು ಸದ್ಬಳಕೆ ಮಾಡಿಕೊಂಡಲ್ಲಿ ಮಾತ್ರ ನಿಮ್ಮ ಏಳಿಗೆ ಸಾಧ್ಯ. ಯಾವುದೇ ಚಟುವಟಿಕೆಯನ್ನು




ನೀವು ನಿರಂತರವಾಗಿ 21 ದಿನಗಳ ಕಾಲ ತಪ್ಪದೇ ಮಾಡಿದರೆ ಕೊನೆಗೆ ಅದುವೇ ಅಭ್ಯಾಸವಾಗುತ್ತದೆ. ಇದನ್ನೇ ನಾವು ಮನೋರೋಗ ಚಿಕಿತ್ಸಾ ವೈದ್ಯಕೀಯದಲ್ಲಿ ಹವ್ಯಾಸ ಅಥವಾ ಚಟ ಎನ್ನುತ್ತೇವೆ. ಕಾರಣ, ನಮ್ಮ ಯುವಕರು ಒಳ್ಳೆಯ ಹವ್ಯಾಸ-ಚಟಗಳನ್ನು ಮೇಳೈಸಿಕೊಂಡು, ಸಮಾಜಕ್ಕೂ, ನಿಮ್ಮ ಮನೆಗೂ ಪ್ರೀತಿ

ಸಭೆಯ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡುತ್ತಾ, ಪ್ರತಿ ವ್ಯಕ್ತಿಯ ಜೀವನಘಟ್ಟದಲ್ಲಿ ಯೌವ್ವನ ಎಂಬುದು ತುಂಬಾ ವಿರಳವಾದುದು. ಈ ಯೌವನದಲ್ಲಿ ಉತ್ತಮ ಚಟುವಟಿಕೆಗಳನ್ನು ಅನುದಿನವೂ ಅನುಸರಿಸಿದರೆ ಬಾಳು ಬಂಗಾರವೇ ಸರಿ ಎಂದರು.

ಪಾತ್ರರಾಗಿರಿ ಎಂದು ಆಶಿಸಿದರು.

ಇನ್ನೋರ್ವ ಅತಿಥಿ ನಾಗರತ್ನ ಮಾತನಾಡುತ್ತಾ, ಇಂದಿನ ಯುವಕರು ಯುವಕರಂತೆ ಕಾಣದೇ ಇರುವುದಕ್ಕೆ ಅವರು ದಿನನಿತ್ಯ ಅನುಸರಿಸಿಕೊಂಡು ಬಂದ ನಡುವಳಿಕೆಗಳೇ ಕಾರಣ. ಆದ್ದರಿಂದ ಮೊದಲು ನೀವೆಲ್ಲರೂ ಒಳ್ಳೆಯ ನಡುವಳಿಕೆಗಳನ್ನು ನಿಮ್ಮಲ್ಲಿ ಅಳವಡಿಸಿಕೊಂಡರೆ, ಉತ್ತಮ ವ್ಯಕ್ತಿ ನೀವಾಗುವುದರಲ್ಲಿ ಸಂದೇಹವೇ ಇಲ್ಲ ಎಂದು ಅಭಿಪ್ರಾಯಪಟ್ಟರು.

ಕಾರ್ಯಾಗಾರದಲ್ಲಿ ಸ್ಟುಡೆಂಟ್ ಎಜ್ಯುಕೇಶನ್ ಸೊಸೈಟಿಯ ಅಧ್ಯಕ್ಷ ರಾಜೇಶ ಕುಲಕರ್ಣಿ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಆಡಳಿತ ಮಂಡಳಿಯ ಸದಸ್ಯರಾದ ಸೈಯ್ಯದ ಮತೀನ್ ಮುಲ್ಲಾ, ರೋಹಿತ ಒಡೆಯರ, ರಾಹುಲ್ ಒಡೆಯರ, ಪುನೀತ ದೇಶಪಾಂಡೆ, ಮಹಾವಿದ್ಯಾಲಯದ ಬೋಧಕ-ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು, ಜನಪ್ರತಿನಿಧಿಗಳು ಉಪಸ್ಥಿತರಿದ್ದರು. ಮುರಲೀಧರ ಸಂಕನೂರ ಸರ್ವರನ್ನೂ ಸ್ವಾಗತಿಸಿ ಅತಿಥಿಗಳನ್ನು ಪರಿಚಯಿಸಿದರೆ, ಉಪನ್ಯಾಸಕಿ ಪ್ರೊ. ಹೀನಾಕೌಸರ ಮಾಳೆಕೊಪ್ಪ ವಂದಿಸಿದರು.

# ವಿದ್ಯಾರ್ಥಿ ಜೀವನ ಅತ್ಯಂತ ಸುಂದರ




■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವಿದ್ಯಾರ್ಥಿಗಳು ಮೊಬೈಲ್ ಹಾಗೂ ದುಶ್ಚಟಗಳ ದಾಸರಾಗದೆ ಉತ್ತಮ ಜೀವನ ಕಟ್ಟಿಕೊಳ್ಳುವ ಕಡೆಗೆ ಗಮನ ವಹಿಸಬೇಕೆಂದು ಅರಸೀಕೆರೆ ಪಿಎಸ್‌ಐ ವಿಜಯಕೃಷ್ಣ ತಿಳಿಸಿದರು.

ತಾಲೂಕಿನ ಅರಸೀಕೆರೆ ಗ್ರಾಮದ ಎಸ್‌ಎಂಸಿಕೆ ಪದವಿ ಪೂರ್ವ ಕಾಲೇಜಿನಲ್ಲಿ ಪೊಲೀಸ್ ಇಲಾಖೆ ವತಿಯಿಂದ ನಡೆದ ಸೈಬರ್ ಕ್ರೈಂ, ಬಾಲ್ಯ ವಿವಾಹ ತಡೆ, ಮಕ್ಕಳ ಸಂರಕ್ಷಣೆ ಮತ್ತು ಫೋಕ್ಸೋ ಕಾಯ್ದೆ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನವು ಅತ್ಯಂತ ಸುಂದರವಾದ್ದು. ಅದನ್ನು ಶಿಸ್ತುಬದ್ಧವಾಗಿ ರೂಪಿಸಿಕೊಳ್ಳಬೇಕು. ಶಿಸ್ತು-ಸಂಯಮ, ಹಾಗೂ ಸಂಸ್ಕಾರ ಹೊಂದಿದ್ದರೆ ವಿದ್ಯೆಯು ತಾನಾಗಿಯೇ ಒಲಿಯುತ್ತದೆ. ಉತ್ತಮವಾದ ಗುರಿಯನ್ನು ಹೊಂದಿ ಜೀವನದಲ್ಲಿ ಯಶಸ್ಸನ್ನು ಪಡೆಯಿರಿ ಎಂದರು.

ಪುರುಷನಿಗೆ 21, ಮಹಿಳೆಯರಿಗೆ 18 ತುಂಬಿದ ನಂತರವೇ ಮದುವೆ ಮಾಡಬೇಕು. ಅದಕ್ಕೂ ಮುನ್ನ ಮಾಡಿದರೆ ಫೋಕ್ಸೋ ಕೇಸ್ ದಾಖಲಿಸಿ ಕಠಿಣ ಶಿಕ್ಷೆ ಅನುಭವಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರಾಚಾರ್ಯ ಪಿ. ದುರುಗೇಶ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಕಾನೂನು ಉಲ್ಲಂಘನೆ ಮಾಡಿದವರು ಶಿಕ್ಷೆ ಅನುಭವಿಸಲೇಬೇಕು. ಹಳ್ಳಿಯಲ್ಲಿ ತಂದೆ-ತಾಯಿಗಳ ಕಷ್ಟಗಳನ್ನು ಅರಿತು ಬಾಳುವವರು ಜೀವನದಲ್ಲಿ ಉನ್ನತ ಸ್ಥಾನ ಪಡೆಯುತ್ತಾರೆ ಮತ್ತು ಅಂತಹವರು ತಪ್ಪುಗಳನ್ನು ಮಾಡುವುದು ತುಂಬಾ ವಿರಳ ಎಂದರು. ಈ ವೇಳೆ ಉಪನ್ಯಾಸಕರಾದ ಚಂದ್ರಪ್ಪ, ನಾಗರಾಜ, ವಿನಾಯಕ, ಪ್ರಭಾಕರ್, ಈಶಪಪ್, ಎ.ಎಚ್. ವಸಂತ್, ಪೊಲೀಸ್ ಸಿಬ್ಬಂದಿಗಳಾದ ರವಿನಾಯ್ಕ, ಹರೀಶ್, ಶಿಕ್ಷಕರಾದ ಪರುಶುರಾಮ್, ಅಜ್ಜಯ್ಯ, ವಿದ್ಯಾರ್ಥಿಗಳು ಇದ್ದರು.

## ಬೆಂಗಳೂರಿನಲ್ಲಿ ನಿಲ್ಲದ ರೋಡ್ ರೇಜ್: ಕಾರು ಟಚ್ ಆಗಿದ್ದಕ್ಕೆ ಯುವಕನನ್ನ ಹತ್ಯೆಗೈದ ದಂಪತಿ.!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನಲ್ಲಿ ರೋಡ್ರೇಜ್ ಪ್ರಕರಣಗಳು ಹತೋಟಿಗೆ ಬರುತ್ತಿಲ್ಲ. ಬದಲಿಗೆ ದಿನೇ ದಿನೇ ರೋಡ್ರೇಜ್ ಕೇಸ್‌ಗಳು ಹೆಚ್ಚುತ್ತಿವೆ. ಇದೀಗ ರೋಡ್ ರೇಜ್ ರೀತಿಯಲ್ಲಿ ಶುರುವಾದ ಗಲಾಟೆ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ಪುಟ್ಟೇನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಅಕ್ಸಿಡೆಂಟ್ ರೀತಿಯಲ್ಲಿ ಬಿಂಬಿಸಿ ಕೊಲೆ ಮಾಡಲಾಗಿದ್ದು, ದರ್ಶನ್ ಎಂಬ ಯುವಕ ಮೃತಪಟ್ಟಿದ್ದಾನೆ. ವರುಣ್ ಎಂಬ ಮತ್ತೊಬ್ಬ ಯುವಕ ಗಾಯಗೊಂಡಿದ್ದಾನೆ.

ದರ್ಶನ್ ಮತ್ತು ವರುಣ್ ಇಬ್ಬರೂ ಬೈಕ್‌ನಲ್ಲಿ ಹೋಗುತ್ತಿದ್ದಾಗ ಮುಂದೆ ಹೋಗುತ್ತಿದ್ದ ಕಾರಿನ ಮಿರರ್‌ಗೆ ಟಚ್ ಆಗಿದೆ. ಈ ವೇಳೆ ಮಿರರ್ ಒಡೆದಿದ್ದು, ಕಾರಿನಲ್ಲಿದ್ದ ಮನೋಜ್ ಕುಮಾರ್ ಮತ್ತು ಆರತಿ ಶರ್ಮ ದಂಪತಿ ಕೋಪಗೊಂಡು, ಸುಮಾರು ಎರಡು ಕಿಲೋಮೀಟರ್‌ನಷ್ಟು ಹಿಂಬಾಲಿಸಿ ಬೈಕ್‌ಗೆ ಡಿಕ್ಕಿ ಹೊಡೆದಿದ್ದಾರೆ ಎನ್ನಲಾಗಿದೆ.

## ಬೇಕರಿಯ ಸಿಹಿ ತಿಂಡಿಗಳನ್ನೂ ಬಿಡದ ಕಳ್ಳರು!

▶▶ಮೊದಲನೇ ಪುಟದಿಂದ

ಮುಖ್ಯ ರಸ್ತೆಯ ಪಕ್ಕದಲ್ಲಿರುವ ಅಂಗಡಿಗಳಲ್ಲಿಯೇ ಸರಣಿ ಕಳ್ಳತನವಾಗಿರುವದು ಆಶ್ಚರ್ಯ ಮೂಡಿಸಿದೆ. ತಗಡಿನ ಶೀಟ್‌ಗಳನ್ನು ಕೊರೆದು ಒಳಬರುವವರೆಗೆ ಯಾವುದೇ ರೀತಿಯ ಸದ್ದು ಕೇಳಿಸದಂತೆ ಇರುವದು ವಿಚಿತ್ರವೆನಿಸಿದ್ದು, ಪೊಲೀಸರು ಶೀಘ್ರವೇ ಕಳ್ಳರನ್ನು ಪತ್ತೆ ಹಚ್ಚಬೇಕು ಮತ್ತು ಪ್ರಮುಖ ಸ್ಥಳಗಳಲ್ಲಿ ರಾತ್ರಿ ವೇಳೆ ಪೊಲೀಸ್ ಗಸ್ತು ಹೆಚ್ಚಿಸಬೇಕು ಎಂದು ಯುವ ಮುಖಂಡ ನಾಗರಾಜ ಪಿಳ್ಳಿ ಆಗ್ರಹಿಸಿದ್ದಾರೆ.

# ರುದ್ರಭೂಮಿ ಅಭಿವೃದ್ಧಿಗೆ ಕಾಯಕಲ್ಪ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶಿಗ್ಲಿ ರಸ್ತೆಯಲ್ಲಿನ ವೀರಶೈವ ಸ್ಮಶಾನ ಭೂಮಿಯನ್ನು ಶಾಸಕ ಡಾ. ಚಂದ್ರು ಲಮಾಣಿ ಅವರು ಸ್ವಂತ ಖರ್ಚಿನಿಂದ ಸ್ವಚ್ಛಗೊಳಿಸುವ ಕಾರ್ಯಕ್ಕೆ ಮುಂದಾಗಿದ್ದಾರೆ.

ಗಿಡಗಂಟಿ, ತ್ಯಾಜ್ಯದಿಂದ ತುಂಬಿ ಸಂಪೂರ್ಣ ನಿರ್ಲಕ್ಷ್ಯಕ್ಕೊಳಗಾದ ಹಿಂದೂ ಸ್ಮಶಾನ ಭೂಮಿಯ ಒಳಹೋಗಲೂ ಪರದಾಡುವ ಪರಿಸ್ಥಿತಿಯಿದೆ. ಈ ಬಗ್ಗೆ ಪುರಸಭೆಗೆ ಅನೇಕ ಬಾರಿ ಹೇಳಿದರೂ ಪ್ರಯೋಜನವಾಗಿಲ್ಲ ಎಂದು ಹಿಂದೂ ಸಮಾಜದ ಕೆಲ ಮುಖಂಡರು ಶಾಸಕರ ಗಮನಕ್ಕೆ ತಂದಿದ್ದರು. ಪರಿಶೀಲಿಸಿದ ಶಾಸಕರು ಸ್ಮಶಾನದಲ್ಲಿ ಬೆಳೆದ ಗಿಡಗಂಟಿ, ಮುಳ್ಳು ಇತರೇ ತಾಜ್ಯವನ್ನು ನಾಲ್ಕೈದು ದಿನ ಜೆಸಿಬಿಯ ಮೂಲಕ ಸ್ವಚ್ಛ ಮಾಡಿಸಿದ್ದಾರೆ.

ಸ್ಮಶಾನಕ್ಕೆ ಹೋಗಲು ತಾತ್ಕಾಲಿಕ ರಸ್ತೆ, ಚರಂಡಿ ನಿರ್ಮಿಸಿಕೊಟ್ಟಿದ್ದಾರಲ್ಲದೆ, ಕೆಟ್ಟು ನಿಂತಿರುವ ಬೋರ್‌ವೆಲ್, ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಪುರಸಭೆಗೆ ಸೂಚಿಸಿದ್ದಾರೆ.

ಶಾಸಕರ ಕಾರ್ಯಕ್ಕೆ ಸಾರ್ವಜನಿಕರಾದ ಭರಮಪ್ಪ ಕೊಡ್ಲಿ, ಬಂಗಾರಪ್ಪ ಮುಳಗುಂದ, ಚನ್ನಪ್ಪ ಚಿಂಚಲಿ, ನೀಲಪ್ಪ ಕನವಳ್ಳಿ, ಈರಣ್ಣ ಮುಳಗುಂದ, ಬಸವರಾಜ ಮೆಣಸಿನಕಾಯಿ, ರಾಮಣ್ಣ ಗೌರಿ, ಈರಪ್ಪ ಗುಡಗೇರಿ, ರಮೇಶ ಹೆಬ್ಬಾಳ, ಮಂಜಪ್ಪ ಮುಳಗುಂದ ಮುಂತಾದವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಅನುಭವಾತ್ಮಕ ಕಲಿಕೆಯಿಂದ ಕಲಿಕಾಶಕ್ತಿ ಹೆಚ್ಚಳ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳು ಚಟುವಟಿಕೆಗಳ ಮೂಲಕ ಕಲಿಯುವುದರಿಂದ ಅವರ ಕಲಿಕೆ ಗಟ್ಟಿಗೊಳ್ಳುತ್ತದೆ ಎಂದು ಐಎಫ್‌ಎ ಸಂಸ್ಥೆಯ ಟಿ.ಎನ್. ಕೃಷ್ಣಮೂರ್ತಿ ಹೇಳಿದರು.

ಅವರು ಸಮೀಪದ ಹುಲಕೋಟಿ ಗ್ರಾಮದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಕೇಂದ್ರೀಯ ಶಾಲೆಯಲ್ಲಿ 'ಕಲಿ ಕಲಿಸು'(ಮುದ್ರಣ ಕಾಶಿ ಗದಗ) ಯೋಜನೆಗೆ ಚಾಲನೆ ನೀಡಿ ಮಾತನಾಡಿ, ಅನುಭವಾತ್ಮಕ ಕಲಿಕೆಯಿಂದ ಮಕ್ಕಳಲ್ಲಿ ಕಲಿಕಾಶಕ್ತಿ ಹೆಚ್ಚುತ್ತದೆ ಎಂದರು. ಗದಗ ಗ್ರಾಮೀಣ ಬಿಇಓ ವಿ.ವಿ. ನಡುವಿನಮನಿ, ಎನ್. ಎಸ್. ಹಿರೇಗೌಡರ, ಗಂಗಾಧರ ಬಬಲಿ, ಎಸ್.ಕೆ. ಹೊಟ್ಟಿನ, ಯಲ್ಲಪ್ಪ ಹಂದ್ರಾಳ, ಸಿಆರ್‌ಪಿ ಬೂದೇಶ ಕಪ್ಲಿ, ವಿಜಯಲಕ್ಷ್ಮೀ ಹಿರೇಕೊಪ್ಪ, ಅನುಪಮಾ ಬಿಳೆಬಾಳ ಮುಂತಾದವರಿದ್ದರು.


# ಕನ್ನಡ ಭಾಷೆ ಅತ್ಯಂತ ಶ್ರೀಮಂತವಾಗಿದೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಇಂದು ಗ್ರಾಮೀಣ ಪ್ರದೇಶವನ್ನು ನಗರೀಕರಣ ಬಾಚಿ ತಬ್ಬಿಕೊಳ್ಳುತ್ತಿದೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಕೆ. ಸತೀಶ್ ಅಭಿಪ್ರಾಯಪಟ್ಟರು.

ಹರಪನಹಳ್ಳಿ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ಮಲ್ಲಮ್ಮ ವಡ್ಡರ್ ವಿರಚಿತ 'ಮತಿಯ ತೇರಲಿ ಖುಷಿಯಲಿ' ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದರು.

ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎನ್.ಜಿ.




ಮನೋಹರ್ ಮಾತನಾಡಿ, ಸ್ಥಳೀಯ ಭಾಷೆಗಳ ಬಗ್ಗೆ ಹಿಡಿತ ಮತ್ತು ಅಭಿಮಾನವಿದ್ದವರು ಉತ್ತಮ ಸಾಹತ್ಯ ರಚಿಸಬಲ್ಲರು. ಜಗತ್ತಿನಲ್ಲಿ ಅತ್ಯಂತ ಪ್ರಸಿದ್ಧಿ ಪಡೆದಿರುವ 18 ಭಾಷೆಗಳಲ್ಲಿ ಕನ್ನಡವು ಮೇರು ಸ್ಥಾನ ಪಡೆದು ತನ್ನ ಹಿರಿಮೆಯನ್ನು ಹೆಚ್ಚಿಸಿದೆ. ಮಕ್ಕಳ ಬಾಲ್ಯಾವಸ್ಥೆಯಲ್ಲಿ ಕನ್ನಡ ಭಾಷೆಯ ಬಗ್ಗೆ ತಿಳಿಸಿದರೆ ಅವರ ವೃತ್ತಿ ಬದುಕಿನಲ್ಲಿ ಅದನ್ನು ಗಟ್ಟಿಯಾಗಿ ಅಳವಡಿಸಿಕೊಳ್ಳುತ್ತಾರೆ ಎಂದರು. ಕವಯಿತ್ರಿ ಮಲ್ಲಮ್ಮ ವಡ್ಡರ್ ಮಾತನಾಡಿ, ಕನ್ನಡ ಭಾಷೆಯು ಅತ್ಯಂತ ಶ್ರೀಮಂತ ಶಬ್ದ ಭಂಡಾರದಿಂದ ಕೂಡಿದೆ. ಕನ್ನಡ ಭಾಷೆಯ ಉಳಿವಿಗಾಗಿ ಪ್ರತಿಯೊಬ್ಬರಲ್ಲೂ ಸಾಹಿತ್ಯದ ಅಭಿರುಚಿಯನ್ನು ಮೂಡಿಸಬೇಕು ಎಂದರು. ಕಸಾಪ ಅಧ್ಯಕ್ಷ ಕೆ.ಉಚ್ಚಂಗೆಪ್ಪ, ಅಧ್ಯಕ್ಷೆ ಸುಭದ್ರಮ್ಮ, ಪ್ರೌಢಶಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಗುರುಮೂರ್ತಿ ಬೋರಯ್ಯ, ಸಾವಿತ್ರಿಬಾ ಪುಲೆ ಸಂಘದ ತಾಲೂಕು ಅಧ್ಯಕ್ಷೆ ಟಿ.ಎಚ್.ಎಂ. ಲತಾ ಮಾತನಾಡಿದರು.

ಈ ವೇಳೆ ಸರ್ಕಾರಿ ನೌಕರರ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ ಸೂರ್ಯನಾಯ್ಕ, ಡಾ. ಎಂ. ಸುರೇಶ್, ಹಾರಾಳ್ ಬುಳ್ಳಪ್ಪ, ಕೆ.ಎನ್. ಬಸವರಾಜ್, ಸಾಹಿತಿ ಪೂಜಾರ್ ಬಸವರಾಜ್, ತಿರುಪತಿ, ಎಂ. ದಾದಾಸಾಬ್, ಅನಿತ ಎಸ್, ಪ್ರಿಯಾಂಕ ಎಂ.ಡಿ, ಶಾರದಮ್ಮ, ಶಬೀನಾ, ಶಶಿಕಲಾ, ನಾಗಭೂಷಣ, ಸೇರಿದಂತೆ ಇತರರಿದ್ದರು.

# ನಾಡಗೀತೆ ಗಾಯನ ಸ್ಪರ್ಧೆ ಅ.30ಕ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಾಡಳಿತ, ತಾಲೂಕು ಪಂಚಾಯಿತಿ, ಶಿಕ್ಷಣ ಇಲಾಖೆ ಹಾಗೂ ತಾಲೂಕಾ ಕಸಾಪ ಆಶ್ರಯದಲ್ಲಿ ರಾಜ್ಯೋತ್ಸವ ಹಾಗೂ ರಾಷ್ಟ್ರಕವಿ ಕುವೆಂಪು ವಿರಚಿತ 'ಜೈ ಭಾರತ ಜನನಿಯ ತನುಜಾತೆ' ಕನ್ನಡ ನಾಡಗೀತೆಗೆ ಶತಮಾನದ ಸಂಭ್ರಮದ ಪ್ರಯುಕ್ತ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಅ. 30ರಂದು ಬೆಳಿಗ್ಗೆ 10.30ಕ್ಕೆ ಪಟ್ಟಣದ ಸೆವೆಂತ್ ಡೇ ಅಡ್ವೆಂಟಿಸ್ಟ್ ಶಾಲೆಯಲ್ಲಿ ನಾಡಗೀತೆ ಗಾಯನ ಸ್ಪರ್ಧೆ ಆಯೋಜಿಸಲಾಗಿದೆ.

ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಸ್ಪರ್ಧೆಯನ್ನು ಉದ್ಘಾಟಿಸುವರು.

ಬಿಇಓ ಎಚ್.ಎನ್. ನಾಯ್ಕ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಪುರಸಭೆ ಸದಸ್ಯರಾದ ಜಯಕ್ಕ ಕಳ್ಳಿ, ಪೂರ್ಣಿಮಾ ಪಾಟೀಲ, ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ, ಶಾಲೆಯ ಪ್ರಾಚಾರ್ಯ ಅಶೋಕ ಪೀಟರ್ ಆಗಮಿಸುವರು. ಮೊರಾರ್ಜಿ ಶಾಲೆಯ ಸಂಗೀತ ಶಿಕ್ಷಕ ಅರ್ಜುನ ವಠಾರ, ಪತ್ರಕರ್ತರ ಸಂಘದ ಅಧ್ಯಕ್ಷ ಮಲ್ಲು ಕಳಸಾಪುರ ನಿರ್ಣಾಯಕರಾಗಿರುವರು ಎಂದು ಪ್ರಕಟಣೆ ತಿಳಿಸಿದೆ.

### ಮೂರ್ತಿ ಪ್ರತಿಷ್ಠಾಪನಾ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಜೀವನ ಮೌಲ್ಯಗಳನ್ನು ಮರೆತರೆ ಬದುಕಿಗೆ ಬೆಲೆಯಿಲ್ಲ

■ ವಿಜಯಸಾಕ್ಷಿ ಸುದ್ದಿ, ಚನ್ನಗಿರಿ

ಸುಖ-ಸಂತೋಷದ ಬದುಕಿಗೆ ಧರ್ಮಾಚರಣೆ ಮುಖ್ಯ. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಶಿವಜ್ಞಾನದ ಅರಿವು, ಆಚರಣೆ ಮುಖ್ಯ. ಜೀವನ ಮೌಲ್ಯಗಳನ್ನು ಮರೆತರೆ ಬದುಕಿಗೆ ಬೆಲೆಯಿಲ್ಲ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಕಶೆಟ್ಟಿಹಳ್ಳಿ ಗ್ರಾಮದಲ್ಲಿ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ಮೂರ್ತಿ ಪ್ರತಿಷ್ಠಾಪನಾ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಒಳ್ಳೆಯ ಮಾತು ಮತ್ತು ಒಳ್ಳೆಯ ಆಚರಣೆಯಲ್ಲಿ ಬದುಕನ್ನು ಪರಿವರ್ತಿಸುವ ಶಕ್ತಿಯಿದೆ. ಧರ್ಮ ಎಂದರೆ



ಉತ್ತಮ ನಡವಳಿಕೆ ಎಂದರ್ಥ. ಅರಿತು ಆಚರಿಸಿ ಬಾಳುವುದರಿಂದ ಬದುಕಿನಲ್ಲಿ ನೆಮ್ಮದಿ ಪಡೆಯಲು ಸಾಧ್ಯವಾಗುತ್ತದೆ. ಮಾನವೀಯ ಮೌಲ್ಯಗಳು ಸಡಿಲಗೊಳ್ಳುತ್ತಿರುವ ಇಂದಿನ ದಿನಗಳಲ್ಲಿ ಸಂಸ್ಕಾರ ಸದ್ವಿಚಾರಗಳನ್ನು ಮನವರಿಕೆ ಮಾಡಿಕೊಡುವ ಅವಶ್ಯಕತೆಯಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಧರ್ಮ ಸಂಹಿತೆಯಲ್ಲಿ ದಶ ಧರ್ಮ ಸೂತ್ರಗಳನ್ನು ಬೋಧಿಸಿ ಉದ್ಧರಿಸಿದ್ದಾರೆ. ದೇವಾಲಯಗಳು ಶ್ರದ್ಧಾ ಭಕ್ತಿ ಕೇಂದ್ರಗಳು. ದೇವಾಲಯದಲ್ಲಿ ಸ್ವಲ್ಪ ಕಾಲ ಕಳೆದರೆ ಮನಸ್ಸಿಗೆ ನೆಮ್ಮದಿ ಸಿಗುತ್ತದೆ. ಗ್ರಾಮ ಚಿಕ್ಕದಾದರೂ ಹಮ್ಮಿಕೊಂಡ ಕಾರ್ಯಕ್ರಮ ದೊಡ್ಡದಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

ಅವರಗೊಳ್ಳ ಪುರವರ್ಗ ಹಿರೇಮಠದ ಓಂಕಾರ ಶಿವಾಚಾರ್ಯರು ಮಾತನಾಡಿ, ಬದುಕು ಭಗವಂತ ಕೊಟ್ಟ ಕೊಡುಗೆ. ಬದುಕಿಗೆ ಬಲ ಮತ್ತು ಸಂಸ್ಕಾರ ಕೊಡುವುದು ಗುರುವಿನ ಧರ್ಮ. ಸತ್ಯ ಶುದ್ಧವಾದ ಕಾಯಕ ಜೀವನ ಶ್ರೇಯೋಭಿವೃದ್ಧಿಗೆ ಕಾರಣವಾಗುತ್ತದೆ. ಗ್ರಾಮದ ಎಲ್ಲ ಸದ್ಭಕ್ತರು ಒಗ್ಗಟ್ಟಿನಿಂದ ಕಾರ್ಯ ಮಾಡಿರುವುದು ತಮ್ಮಲ್ಲಿ ಅಡಗಿರುವ ಧರ್ಮ ಶ್ರದ್ಧೆಗೆ ಸಾಕ್ಷಿಯಾಗಿದೆ ಎಂದರು.

ರಾಮಘಟ್ಟ ರೇವಣಸಿದ್ಧೇಶ್ವರ ಶಿವಾಚಾರ್ಯರು, ಕಣ್ವಕುಪ್ಪಿ ಗವಿಮಠದ ಡಾ. ನಾಲ್ವಡಿ ಶಾಂತಲಿಂಗ ಶಿವಾಚಾರ್ಯರು,

> ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ತೇಜಸ್ವಿ ಪಟೇಲ ಮಾತನಾಡಿ, ಕಶೆಟ್ಟಿಹಳ್ಳಿ ಭಕ್ತಿಯ ಗ್ರಾಮ.
>
> ಇಲ್ಲಿರುವ ರೈತ ಸಮುದಾಯ ಶ್ರಮ ಜೀವಿಗಳು. ಗ್ರಾಮದ ಜನಸಂಖ್ಯೆ ಹೆಚ್ಚುತ್ತಿರುವುದರಿಂದ 12 ಎಕರೆ ಭೂಮಿಯಲ್ಲಿ ನಿವೇಶನ ವಿಂಗಡಿಸಿ ಫಲಾನುಭವಿಗಳಿಗೆ ಮುಂದಿನ ದಿನಗಳಲ್ಲಿ ಕೊಡುವ ಯೋಜನೆ ಮಾಡುತ್ತೇವೆ ಎಂದರು.

ಹೊನ್ನಾಳಿ ಹಿರೇಕಲ್ಮಠದ ಡಾ. ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ರಾಂಪುರ ಶಿವಕುಮಾರ ಹಾಲಸ್ವಾಮಿಗಳು, ದುಗ್ಗಾವತಿ ಹಿರೇಮಠದ ವೀರಭದ್ರ ಸ್ವಾಮಿಗಳು, ಕತ್ತಲಗೆರೆ ಬೃಹನ್ಮಠದ ಹಾಲಸಿದ್ದೇಶ್ವರ ಸ್ವಾಮಿಗಳು ಪಾಲ್ಗೊಂಡಿದ್ದರು.

ಕೆ.ಎಂ. ಮಂಜಪ್ಪ, ರಾಮಸ್ವಾಮಿ, ರುದ್ರಮ್ಮ, ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಮಠದ ಮಹಾರುದ್ರಯ್ಯ ಸ್ವಾಗತಿಸಿದರು. ಶಿಕ್ಷಕ ಜಯಣ್ಣ ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಉತ್ಸವ ಗ್ರಾಮದಲ್ಲಿ ಸಡಗರ-ಸಂಭ್ರಮದಿಂದ ಜರುಗಿತು. ಕುಂಭ ಹೊತ್ತ ಮಹಿಳೆಯರು ಆರತಿ ಹಿಡಿದ ಸುಮಂಗಲೆಯರು, ವಾದ್ಯ ವೈಭವಗಳೊಂದಿಗೆ ಮೆರವಣಿಗೆ ಜರುಗಿತು. ನಂತರ ದೇವತಾ ವಿಗ್ರಹ ಪ್ರತಿಷ್ಠಾಪನೆ ಮಾಡಿ ಭಕ್ತ ಸಮೂಹವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.

# ನ.1ರಂದು ಕನ್ನಡ ರಾಜ್ಯೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತದಿಂದ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ನವೆಂಬರ್ 1 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಧ್ವಜಾರೋಹಣ ನೆರವೇರಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್.ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಕರ್ನಾಟಕ ಯೋಜನೆ ಕಾರ್ಯಕ್ರಮ ಸಂಯೋಜನೆ ಮತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಎಂ. ಆಗಮಿಸಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಸ್ವಾಗತ ಕೋರಿದ್ದಾರೆ.

2025 ರ ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮಗಳು ಬೆಳಿಗ್ಗೆ 9 ಗಂಟೆಗೆ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರಿಂದ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ, ರಾಷ್ಟ್ರಗೀತೆ, ನಾಡಗೀತೆ, ಪರೇಡ್ ವೀಕ್ಷಣೆ , ಪಥ ಸಂಚಲನ ಮತ್ತು ವಂದನೆ ಸ್ವೀಕಾರ, ರಾಜ್ಯೋತ್ಸವದ ಸಂದೇಶ, ಸಾಧಕರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

# ನ.8ಕ್ಕೆ ಬೃಹತ್ ಹಿಂದೂ ಸಮಾವೇಶ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಿಲ್ಲೆಯ ವಿವಿಧ ಹಿಂದೂ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ದಾಸಶ್ರೇಷ್ಠ ಭಕ್ತ ಕನಕದಾಸರ ಹಾಗೂ ವೀರರಾಣಿ ಕಿತ್ತೂರು ಚೆನ್ನಮ್ಮ ಅವರ ಜಯಂತ್ಯುತ್ಸವದ ಪ್ರಯುಕ್ತ ನ. 8ರಂದು ಸಂಜೆ 5 ಗಂಟೆಗೆ ಶಿರಹಟ್ಟಿಯ ಎಫ್.ಎಂ. ಡಬಾಲಿ ಪ್ರೌಢಶಾಲಾ ಮೈದಾನದಲ್ಲಿ ಬೃಹತ್ ಹಿಂದೂ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕಾ ಹಿಂದೂ ಸಂಘಟನೆಯ ಅಧ್ಯಕ್ಷ ಸಂತೋಷ ಕುರಿ ಹೇಳಿದರು.

ಅವರು ಬುಧವಾರ ಶಿರಹಟ್ಟಿಯ ಪ್ರವಾಸಿಯ ಮಂದಿರದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಜಯಂತ್ಯುತ್ಸವದ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು. ಅಂದಿನ ಕಾರ್ಯಕ್ರಮಕ್ಕೆ ಶ್ರೀರಾಮಸೇನಾ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ ಮುತಾಲಿಕ, ಮಾಜಿ ಕೇಂದ್ರ ಸಚಿವ ಹಾಗೂ ವಿಜಯಪುರದ ಶಾಸಕ ಬಸನಗೌಡ ಪಾಟೀಲ ಯತ್ನಾಳ, ಶ್ರೀರಾಮ ಸೇನೆಯ ರಾಜ್ಯ ಸಂಚಾಲಕ ರಾಜು ಖಾನಪ್ಪನವರ ಸೇರಿದಂತೆ ರಾಜ್ಯ ಮಟ್ಟದ ನಾಯಕರು ಆಗಮಿಸಲಿದ್ದು, ಜಿಲ್ಲೆಯ ಹಿಂದೂ ಸಮಾಜ ಬಾಂಧವರು ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ರಾಜೀವರಡ್ಡಿ ಬಮ್ಮನಕಟ್ಟಿ, ಯಲ್ಲಪ್ಪ ಇಂಗಳಗಿ, ಸಂತೋಷ ತೋಡೇಕರ, ಪ್ರಕಾಶ ಕಲ್ಯಾಣಿ ಮುಂತಾದವರು ಉಪಸ್ಥಿತರಿದ್ದರು.

# ನಾಳೆ ನರಗುಂದದಲ್ಲಿ ಕಾರ್ಮಿಕ ಸಮುದಾಯ ಭವನ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಬೆಂಗಳೂರು ಇವರ ಸಹಯೋಗದಲ್ಲಿ ನರಗುಂದ ಪಟ್ಟಣದ ಕಾರ್ಮಿಕ ಸಮುದಾಯ ಭವನದ ಉದ್ಘಾಟನಾ ಸಮಾರಂಭವನ್ನು ನರಗುಂದದ ಡಾಲರ್ಸ್ ಕಾಲೋನಿಯಲ್ಲಿ ಅಕ್ಟೋಬರ್ 31 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಸಚಿವ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಎಸ್ ಲಾಡ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ನರಗುಂದ ಶಾಸಕ ಸಿ.ಸಿ.ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್.ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಪುರಸಭೆ ಅಧ್ಯಕ್ಷೆ ಶ್ರೀಮತಿ ನೀಲವ್ವ ವಡ್ಡಿಗೇರಿ, ಉಪಾಧ್ಯಕ್ಷ ಚಂದ್ರಗೌಡ ಕೆ ಪಾಟೀಲ ಆಗಮಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್, ಕರ್ನಾಟಕ ಯೋಜನೆ ಕಾರ್ಯಕ್ರಮ ಸಂಯೋಜನೆ ಮತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಕಾರ್ಮಿಕ ಇಲಾಖೆ ಆಯುಕ್ತ ಡಾ.ಎಚ್. ಎನ್.ಗೋಪಾಲಕೃಷ್ಣ, ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ, ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ ಕಾರ್ಯದರ್ಶಿಗಳು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಭಾರತಿ ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಕಲ್ಯಾಣ ಆಯುಕ್ತ ಆಂಜನೇಯ ಟಿ ಆಗಮಿಸಲಿದ್ದಾರೆ.

ಬೆಳಗಾವಿಯ ಪ್ರಾದೇಶಿಕ ಉಪಕಾರ್ಮಿಕ ಆಯುಕ್ತ ಡಿ.ಜಿ.ನಾಗೇಶ್, ಧಾರವಾಡ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತ ಸಚಿನ್ ವೈ ಹಳೇಮನಿ, ಗದಗ ಉಪವಿಭಾಗದ ಕಾರ್ಮಿಕ ಅಧಿಕಾರಿ ಶ್ರೀಶೈಲ ಎಸ್ ಸೋಮನಕಟ್ಟಿ , ನರಗುಂದ ವೃತ್ತ ಕಾರ್ಮಿಕ ನಿರೀಕ್ಷಕರಾದ ಶ್ರೀಮತಿ ಪೂಜಾ ಶಿಂಧೆ ಸ್ವಾಗತ ಕೋರಿದ್ದಾರೆ.

# ಸಾಂಘಿಕ ಚಟುವಟಿಕೆಗಳ ಉದ್ಘಾಟನೆ ನಾಳೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನೇಶ್ವರ ಕಲಾ, ವಿಜ್ಞಾನ, ವಾಣಿಜ್ಯ, ಬಿ.ಸಿ.ಎ. ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರಗಳ 2025-26ನೇ ಸಾಲಿನ ವಿವಿಧ ಸಾಂಘಿಕ ಚಟುವಟಿಕೆಗಳ ಉದ್ಘಾಟನಾ ಸಮಾರಂಭವು ಅ. 31ರ ಮಧ್ಯಾಹ್ನ 2ಕ್ಕೆ ಮಹಾವಿದ್ಯಾಲಯದ ಸಭಾಭವನದಲ್ಲಿ ನಡೆಯಲಿದೆ ಎಂದು ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆಯಲಿರುವ ಈ ಸಮಾರಂಭದ ಅಧ್ಯಕ್ಷತೆಯನ್ನು ಕಾಲೇಜು ಆಡಳಿತ ಮಂಡಳಿಯ ಚೇರಮನ್ ಡಾ. ಎಸ್.ಎ. ಪಾಟೀಲ ವಹಿಸಲಿದ್ದಾರೆ. ಧಾರವಾಡ ಕ.ವಿ.ವಿ ಮೌಲ್ಯಮಾಪನ ಕುಲಸಚಿವ ಡಾ. ನಿಜಲಿಂಗಪ್ಪ ಮಟ್ಟಿಹಾಳ ಸಮಾರಂಭದ ಉದ್ಘಾಟನೆ ನೆರವೇರಿಸಲಿದ್ದು, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಮಂಜುನಾಥ ಜಂಗವಾಡ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಆಡಳಿತ ಮಂಡಳಿಯ ಸದಸ್ಯ ಬಿ.ಎಫ್. ಚೇಗರೆಡ್ಡಿ, ಡಾ. ಜಿ.ಕೆ. ಕಾಳೆ, ಸೋಮಣ್ಣ ಹರ್ಲಾಪೂರ ಗೌರವ ಉಪಸ್ಥಿತಿ ವಹಿಸುವರು. ಇದೇ ಸಂದರ್ಭದಲ್ಲಿ ನಿವೃತ್ತ ಉಪನ್ಯಾಸಕಿ ಶಾರದಾ ಪಾಟೀಲ, ಹಿರಿಯ ಸಾಹಿತಿ ಡಾ. ಬಿ.ವಿ. ಶಿರೂರ ಮತ್ತು ಬೆಳಗಾವಿಯ ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ವೀರಣ್ಣ ಜಿರಾಳ್ ಅವರನ್ನು ಸನ್ಮಾನಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ಕನ್ನಡ ಜಾಗೃತಿ ಸಮಿತಿಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಕರ್ನಾಟಕ ಸರಕಾರದಿಂದ ಕನ್ನಡ ಜಾಗೃತಿ ಸಮಿತಿ, ಜಿಲ್ಲಾ ಮಟ್ಟದ ಸಮಿತಿಗಳನ್ನು ಆಯ್ಕೆ ಮಾಡಲಾಗಿದ್ದು, ಗದಗ ಜಿಲ್ಲಾ ಮಟ್ಟದ ಸಮಿತಿಗೆ ಕನ್ನಡ ಸಾಹಿತ್ಯದ ಕಾಳಜಿಯುಳ್ಳವರು, ಶರಣತತ್ವ ಪ್ರತಿಪಾದಕರು, ಚಿಂತಕರು, ಅನುಭಾವಿಗಳಾದ ಶರಣ ಅಶೋಕ ಬ.ಬರಗುಂಡಿ ಇವರು ಆಯ್ಕೆಯಾಗಿದ್ದಾರೆ.

ಇವರ ಅಧಿಕಾರಾವಧಿಯಲ್ಲಿ ಗದಗ ಜಿಲ್ಲಾ ಮಟ್ಟದ ಕನ್ನಡ ಜಾಗೃತಿ, ಅಭಿವೃದ್ಧಿ ಮತ್ತು ಕನ್ನಡ ಉಳಿವಿಗಾಗಿ ಶ್ರಮವಹಿಸಲಿ ಎಂದು ಬಸವದಳ-ಬಸವಕೇಂದ್ರ,



ಲಿಂಗಾಯತ ಪ್ರಗತಿಶೀಲ ಸಂಘ, ಶರಣ ಸಾಹಿತ್ಯ ಪರಿಷತ್ತು, ಗದಗ ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭೆ ಹಾಗೂ ಬಸವಪರ ಸಂಘಟನೆಗಳ ಪದಾಧಿಕಾರಿಗಳು ಆಶಿಸಿದ್ದಾರೆ.




ಗದುಗಿನ ಶ್ರೀ ಜಗದಂಬಾ ಶಿಕ್ಷಣ ಕೇಂದ್ರದ ಎಸ್.ಎಸ್.ಕೆ. ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಶ್ರೀ ಸಹಸ್ರಾರ್ಜುನ ಜಯಂತಿಯನ್ನು ವಿಜೃಂಭಣೆಯಿಂದ ನೆರವೇರಿಸಲಾಯಿತು. ಎಸ್.ಎಸ್.ಕೆ. ಸಮಾಜದ ಅಧ್ಯಕ್ಷ ಫಕೀರಸಾ ಭಾಂಡಗೆ, ಉಪಾಧ್ಯಕ್ಷ ರಾಜು ಬದಿ, ಕಾರ್ಯದರ್ಶಿ ವಿನೋದ ಶಿದ್ಲಿಂಗ, ಶಾಲಾ ಚೇರಮನ್ ಅನಿಲ ಖಟವಟೆ, ಮಾರುತಿ ಪೂಜಾರ, ಎಸ್.ಎಸ್.ಕೆ. ಶಾಲೆಯ ಬೋಧಕ, ಬೋಧಕೇತರ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ವಿವಿಧ ಸ್ಥಳಗಳಲ್ಲಿ ಸ್ವಚ್ಛತಾ ಕಾರ್ಯ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೀಪಾವಳಿ ಹಬ್ಬ ಮುಗಿದ ನಂತರ ಪಟ್ಟಣದಲ್ಲಿ ಎಲ್ಲೆಂದರಲ್ಲಿ ಕಸ ತುಂಬಿದ್ದು, ವಿಶೇಷವಾಗಿ ಪಾರ್ವತಿ ಮಕ್ಕಳ ಬಳಗದ ಪ್ರಾಥಮಿಕ ಶಾಲೆ, ತೋಂಟದ್ದೇವರಮಠದ ಹತ್ತಿರ, ಖರಾಟೆ ಅವರ ಓಣಿ, ಹಳೇ ಪೊಲೀಸ್ ಠಾಣೆ, ಬಜಾರ ಸೇರಿದಂತೆ ಮತ್ತಿತರ ಪ್ರಮುಖ ಸ್ಥಳಗಳಲ್ಲಿ ಕಸದ ರಾಶಿಯೇ ತುಂಬಿಕೊಂಡಿತ್ತು. ಇದನ್ನು ಮನಗಂಡ ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ಲ ಹಾಗೂ ಸಿಬ್ಬಂದಿ ಬುಧವಾರ ಪೌರ ಕಾರ್ಮಿಕರೊಂದಿಗೆ ಸ್ವಚ್ಛಗೊಳಿಸಿದರು.

ಕಸ ಸಾಗಿಸಲು ಪುರಸಭೆ ವಾಹನಗಳನ್ನು ಹೊರತುಪಡಿಸಿ ಎರಡು ಖಾಸಗಿ ವಾಹನಗಳನ್ನು ಬಾಡಿಗೆಗೆ ಪಡೆದುಕೊಳ್ಳಲಾಗಿತ್ತು. ಬೆಳಗ್ಗೆಯಿಂದ ಸಂಜೆಯವರೆಗೂ ಸ್ವಚ್ಛತಾ ಕಾರ್ಯ ನಡೆಯಿತು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಮಾತನಾಡಿ, ಊರನ್ನು ಸ್ವಚ್ಛ ಹಾಗೂ ಸುಂದರವಾಗಿ ಇಡುವಲ್ಲಿ ಸಾರ್ವಜನಿಕರ ಪಾತ್ರವೂ ಮುಖ್ಯವಾಗಿದೆ.

ಎಲ್ಲೆಂದರಲ್ಲಿ ಕಸ ಬಿಸಾಕದೆ ಕಸ ಸಂಗ್ರಹಿಸಲು ಬರುವ ಪುರಸಭೆ ವಾಹನಗಳಲ್ಲೇ ಹಾಕಬೇಕು. ವಿಶೇಷವಾಗಿ ಹೂ, ಹಣ್ಣು, ಹೋಟೆಲ್ ವ್ಯಾಪಾರಸ್ಥರು ಎಲ್ಲೆಂದರಲ್ಲಿ ಕಸ ಚೆಲ್ಲಬಾರದು ಎಂದು ತಿಳಿಸಿದರು.

# ಹಸಿದವರಿಗೆ ಅನ್ನ ನೀಡುವುದು ಶ್ರೇಷ್ಠ ಕಾರ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಸಕಲ ದಾನಗಳಲ್ಲಿ ಅನ್ನದಾನ ಶ್ರೇಷ್ಠವಾಗಿದೆ. ನಾವೆಷ್ಟೇ ಸಿರಿವಂತರಾದರೂ ಹಸಿದು ಬಂದವರಿಗೆ ಒಂದು ತುತ್ತು ಅನ್ನ ನೀಡದಿದ್ದರೆ ನಾವು ಗಳಿಸಿದ ಸಂಪತ್ತು ಶೂನ್ಯಕ್ಕೆ ಸಮಾನ ಎಂದು ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ನೂತನ ಅಧ್ಯಕ್ಷ ರಾಜು ಗುಡಿಮನಿ ಹೇಳಿದರು.

ನಗರದ ಮಹಾತ್ಮ ಗಾಂಧಿ ವೃತ್ತದ ಬಳಿಯ ಹಳೇ ಜಿಲ್ಲಾಸ್ಪತ್ರೆಯ ಆವರಣದಲ್ಲಿರುವ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿ, ಜೀವನದಲ್ಲಿ ದುಡ್ಡು ಗಳಿಸುವುದು ಮುಖ್ಯವಲ್ಲ. ಗಳಿಸಿದ ಹಣದಲ್ಲಿ ನಾವೆಷ್ಟು ಜನರಿಗೆ ಒಳ್ಳೆಯದನ್ನು ಮಾಡಿದ್ದೇವೆ ಎನ್ನುವುದು ಮುಖ್ಯವಾಗಿದೆ.



ನಗರದಲ್ಲಿ ಹಸಿದವರಿಗೆ ಅನ್ನ ನೀಡುವ ಮೂಲಕ ಪುಣ್ಯದ ಕೆಲಸ ಮಾಡುತ್ತಿರುವ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ಕಾರ್ಯ ಶ್ಲಾಘನೀಯವಾಗಿದೆ. ಮುಂದಿನ ದಿನಗಳಲ್ಲಿ ನಾವೆಲ್ಲ ಪದಾಧಿಕಾರಿಗಳು ಕೂಡ ಈ ಕಾರ್ಯಕ್ಕೆ ಸೇವೆ ಸಲ್ಲಿಸುತ್ತೇವೆ ಎಂದರು.

ರಾಷ್ಟ್ರಪತಿ ಪದಕ ಪುರಸ್ಕೃತ ಪಿಎಸ್ಐ ಮಾರುತಿ ಜೋಗದಂಡಕರ ಅವರು ಸನ್ಮಾನ ಸ್ವೀಕರಿಸಿ ಮಾತನಾಡಿ, ಗದಗ ನಗರದಲ್ಲಿ ಹಸಿದು ಬಂದವರಿಗೆ ಕೇವಲ 5 ರೂ.ಗಳಲ್ಲಿ ಹೊಟ್ಟೆ ತುಂಬಾ ಊಟ ನೀಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಈ ಕಾರ್ಯವನ್ನು ನಿರಂತರವಾಗಿ ನಡೆಸುತ್ತ ಬಂದಿರುವ ಆಡಳಿತ ಮಂಡಳಿ ಸೇವೆಗೆ ನಾವೆಲ್ಲರೂ ಕೈಜೋಡಿಸಬೇಕಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಗೆ ನೂತನ ಉಪಾಧ್ಯಕ್ಷರಾಗಿ ಆಯ್ಕೆಯಾದ ಜಯದೇವ ಮೆಣಸಗಿ, ಪ್ರಕಾಶ ಉಗಲಾಟದ, ಸಹ ಗೌರವ ಕಾರ್ಯದರ್ಶಿಯಾಗಿ ಆಯ್ಕೆಯಾದ ಅಶೋಕ ಸಂಕಣ್ಣವರ ಅವರನ್ನು ಸನ್ಮಾನಿಸಲಾಯಿತು.

ವೇದಿಕೆ ಮೇಲೆ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ಗೌರವಾಧ್ಯಕ್ಷ ಎಸ್. ಎಸ್. ಕಳಸಾಪೂರ, ಉಪಾಧ್ಯಕ್ಷ ಉಮೇಶ ಪೂಜಾರ, ಹಿರಿಯರಾದ ಮರಿಗುದ್ದಿ, ಪತ್ರಿಮಠ, ಸದಸ್ಯರಾದ ರಾಜಣ್ಣ ಮಲ್ಲಾಡದ, ಮುತ್ತು ಜಡಿ, ಸಮಾಜ ಸೇವಕ ಎಚ್.ಬಿ. ಸಿಂಗ್ರಿ, ನಿಲಯದ ಮೇಲ್ವಿಚಾರಕಿ ವಿಶಾಲಾಕ್ಷಿ ಬಡಿಗೇರ ಮುಂತಾದವರು ಉಪಸ್ಥಿತರಿದ್ದರು. ಪ್ರಸಾದ ನಿಲಯದ ಖಜಾಂಚಿ ವೆಂಕಟೇಶ ಇಮರಾಪೂರ ಕಾರ್ಯಕ್ರಮ ನಿರೂಪಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka